ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795
ಬುಧವಾರ: 20-05-2026
EMAIL : dairyadadaari@gmail.com
ಸಂಪುಟ: 01 ಸಂಚಿಕೆ: 148
ಬೆಲೆ ರೂ : 2.00
ರಾಯಚೂರು
ಪುಟ: 4

# ಸಾಧನಾ ಸಂಭ್ರಮ: 1.52 ಲಕ್ಷ ಮಂದಿಗೆ ಹಕ್ಕುಪತ್ರ ವಿತರಣೆ

## ಗ್ಯಾರಂಟಿ ಯೋಜನೆಗಳು ಮತ್ತು ಅಭಿವೃದ್ಧಿ ಕಾರ್ಯಗಳ ಮಹಾ ಪ್ರದರ್ಶನ

**ತುಮಕೂರು, ಮೇ 19–** ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ನಾಳೆಗೆ (ಮೇ 20) 3 ವರ್ಷ ತುಂಬುತ್ತಿರುವ ಸುಸಂದರ್ಭದಲ್ಲಿ ಸರ್ಕಾರದ ವತಿಯಿಂದ ಕಲ್ಪತರುನಾಡಲ್ಲಿ ಹಮ್ಮಿಕೊಂಡಿದ್ದ ಪ್ರಗತಿಯತ್ತ ಕರ್ನಾಟಕ ಸಾರ್ಥಕ ಸೇವೆಯ ಸಮರ್ಪಣೆ ಹಾಗೂ ಸಾಧನಾ ಸಮಾವೇಶದಲ್ಲಿ ಕೈ ನಾಯಕರು ಮೂರು ವರ್ಷದಲ್ಲಿ ಆಗಿರುವ ಅಭಿವೃದ್ಧಿ ಕಾರ್ಯಗಳನ್ನು ನಾಡಿನ ಜನತೆಯ ಮುಂದಿಡುವ ಮೂಲಕ ವಿಪಕ್ಷಗಳ ವಿರುದ್ಧ ರಣಕಹಳೆ ಮೊಳಗಿಸಿದರು.

ರಾಜ್ಯದಲ್ಲಿ ಮುಂಬರುವ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಜಿಬಿಎ), ಸ್ಥಳೀಯ ಸಂಸ್ಥೆಗಳ ಚುನಾವಣೆ, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯ್ತಿ, ಗ್ರಾಮ ಪಂಚಾಯ್ತಿ ಚುನಾವಣೆ ಹಾಗೂ 2028ರ ವಿಧಾನಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಕೈ ನಾಯಕರು ನಗರದಲ್ಲಿ ನಡೆಸಿದ ಸಾಧನಾ ಸಮಾವೇಶದಲ್ಲಿ ವಿಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ವಿರುದ್ಧ ರಣವೀಳ್ಯ ಸಾರುವ ಮೂಲಕ ಶಕ್ತಿ ಪ್ರದರ್ಶನ ನಡೆಸಿದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ 3 ವರ್ಷಗಳಲ್ಲಿ ಗ್ಯಾರಂಟಿ ಯೋಜನೆಗಳು ಸೇರಿದಂತೆ ಕೈಗೊಂಡಿರುವ ಅಭಿವೃದ್ಧಿ ಕಾರ್ಯಕ್ರಮಗಳನ್ನು ಸಮಾವೇಶದಲ್ಲಿ ಪಾಲ್ಗೊಂಡಿದ್ದ ನಾಡಿನ ಜನತೆಯ ಗಮನಕ್ಕೆ ತರುವ ಮುಖೇನ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ ಎಂಬ ಮಾತನ್ನು ಕೈ ನಾಯಕರು ಸಾರಿ ಹೇಳಿದರು.

ಮುಂಬರುವ ದಿನಗಳಲ್ಲಿ ನಡೆಯುವ ಜಿಬಿಎ, ಸ್ಥಳೀಯ ಸಂಸ್ಥೆಗಳ ಚುನಾವಣೆ, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯ್ತಿ ಚುನಾವಣೆ ಹಾಗೂ 2028ರ ವಿಧಾನಸಭಾ ಚುನಾವಣೆಯಲ್ಲೂ ಸಹ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವಂತೆ ಪರೋಕ್ಷವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸೇರಿದಂತೆ ಕೈ ನಾಯಕರು ಸಾಧನಾ ಸಮಾವೇಶದಲ್ಲಿ ದೊಡ್ಡ ಸಂಖ್ಯೆಯಲ್ಲಿ ನೆರೆದಿದ್ದ ಜನಸ್ತೋಮದ ಮುಂದೆ ಮನವಿ ಮಾಡಿದ್ದು ಕಂಡು ಬಂತು.



1.52 ಲಕ್ಷ ಮಂದಿಗೆ ಹಕ್ಕುಪತ್ರ ವಿತರಣೆ: ನಗರದ ಸರ್ಕಾರಿ ಜೂನಿಯರ್ ಕಾಲೇಜು ಮೈದಾನದಲ್ಲಿ ನಡೆದ ಸರ್ಕಾರದ ಸಾಧನಾ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ತುಮಕೂರು ಜಿಲ್ಲೆಯ ಕಂದಾಯ ಇಲಾಖೆಯ ವಿವಿಧ ಕಾರ್ಯಕ್ರಮಗಳಡಿ ಇ-ಪೌತಿ ಆಂದೋಲನಾ 1,06,000, ದರಖಾಸ್ತು ಪೋಡಿ 24,256; ಕಂದಾಯ ಗ್ರಾಮ ಹಕ್ಕು ಪತ್ರ 20,666 ಮತ್ತು ಪೋಡಿ ಮುಕ್ತ ಅಭಿಯಾನ 1570 ಸೇರಿದಂತೆ ಒಟ್ಟು 1,52,492 ಫಲಾನುಭವಿಗಳಿಗೆ ಹಕ್ಕು ಪತ್ರ / ಆದೇಶ ಪತ್ರಗಳನ್ನು ವಿತರಿಸಿದರು.

**ಅಂಗನವಾಡಿ ನೌಕರರಿಗೆ ನೇಮಕಾತಿ ಆದೇಶ ಪತ್ರ:** ರಾಜ್ಯದಲ್ಲಿಯೇ ದೊಡ್ಡ ಸಂಖ್ಯೆಯಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಒಟ್ಟು 600 ಹುದ್ದೆಗಳ ನೇಮಕಾತಿ ಆದೇಶವನ್ನು ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ವಿತರಿಸುವ ಮೂಲಕ ದಾಖಲೆ ಬರೆದರು.

ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ: ಜಿಲ್ಲೆಯಲ್ಲಿ ಕೈಗೊಳ್ಳಲಾಗಿರುವ ಸುಮಾರು 662.35 ಕೋಟಿ ರೂ. ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದೇ ಸಂದರ್ಭದಲ್ಲಿ ನೆರವೇರಿಸಿದರು.

ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ತುಮಕೂರು ಮತ್ತು ಮಧುಗಿರಿ, ಲೋಕೋಪಯೋಗಿ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ, ಇಂಧನ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, ಕೆಆರ್ಐಡಿಎಲ್, ಮಹಿಳಾ ಮತ್ತು ಮಕ್ಕಳ ಇಲಾಖೆ, ಗೃಹ ಇಲಾಖೆ, ಕಾರ್ಮಿಕ ಇಲಾಖೆ, ಜಿಲ್ಲಾ ನಗರಾಭಿವೃದ್ಧಿ ಕೋಶ, ಗಣಿ ಮತ್ತು ಪರಿಸರ ಪುನಶ್ಚೇತನ ಇಲಾಖೆ, ಪ್ರಾದೇಶಿಕ ಸಾರಿಗೆ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಂದ ಜಿಲ್ಲೆಯಲ್ಲಿ ಕೈಗೊಂಡು ಪೂರ್ಣಗೊಂಡಿರುವ ಕಾಮಗಾರಿಗಳನ್ನು ಉದ್ಘಾಟಿಸಿ ಮುಖ್ಯಮಂತ್ರಿಗಳು, ಹೊಸದಾಗಿ ಕೈಗೆತ್ತಿಕೊಳ್ಳುತ್ತಿರುವ ಅಭಿವೃದ್ಧಿ ಕಾರ್ಯಗಳಿಗೆ ಶಿಲಾನ್ಯಾಸ ನೆರವೇರಿಸಿದರು.

**ಗಿನ್ನಿಸ್ ದಾಖಲೆ:** ಜಿಲ್ಲೆಯಲ್ಲಿ ಕಂದಾಯ ಇಲಾಖೆ ಜನಸಾಮಾನ್ಯರಿಗೆ ಸೇವೆ, ಹಕ್ಕುಪತ್ರ, ಸವಲತ್ತುಗಳನ್ನು ಒದಗಿಸುವಲ್ಲಿ ರಾಜ್ಯದಲ್ಲೇ ಪ್ರಥಮ ಸ್ಥಾನದಲ್ಲಿದ್ದು, ಈ ಸಾಧನೆಗಾಗಿ ಗಿನ್ನಿಸ್ ವರ್ಲ್ಡ್ ಬುಕ್ ಆಫ್ ರೆಕಾರ್ಡ್ ದಾಖಲೆ ಸೇರಿರುವ ಹಿನ್ನೆಲೆಯಲ್ಲಿ ಸಮಾವೇಶದಲ್ಲಿ ಈ ಸಾಧನೆಯ ಪ್ರಶಸ್ತಿಯನ್ನು ಇಂಗ್ಲೆಂಡ್‌ನಿಂದ ಗಿನ್ನಿಸ್ ಸಂಸ್ಥೆಯವರು 2ನೇಪುಟಕ್ಕೆ

## ಸರ್ಕಾರದ ಸಮಾರಾಧನೆ ಸಮಾವೇಶ :ಬಿವೈವಿ ಆಕ್ರೋಶ



**ಬೆಂಗಳೂರು.ಮೇ19:**ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷಗಳಾಗುತ್ತಾ ಬಂದರೂ ಯಾವುದೇ ಅಭಿವೃದ್ಧಿ ಕೆಲಸ ಮಾಡಿಲ್ಲ.

ತುಮಕೂರಿನಲ್ಲಿ ಇಂದು ನಡೆಯುತ್ತಿರುವುದು ಸರ್ಕಾರದ ಸಾಧನಾ ಸಮಾವೇಶ ಅಲ್ಲ, ಅದು ಸತ್ತ ಸರ್ಕಾರದ ಸಮಾರಾಧನೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತೀವ್ರವಾಗಿ ಆಕ್ರೋಶ ಹೊರಹಾಕಿದ್ದಾರೆ.ಬೆಂಗಳೂರಿನ ಮಲ್ಲೇಶ್ವರಂನಲ್ಲಿರುವ ಬಿಜೆಪಿ ರಾಜ್ಯ ಕಚೇರಿಯಲ್ಲಿ ಇಂದು ತುಮಕೂರು ಸಾಧನಾ ಸಮಾವೇಶದ ಹಿನ್ನೆಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ತುರ್ತು ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಸರ್ಕಾರದ ಜಾಹೀರಾತುಗಳ ಭಾಷೆಯನ್ನು ಉಲ್ಲೇಖಿಸಿ ಲೇವಡಿ ಮಾಡಿದ ವಿಜಯೇಂದ್ರ, "ಗ್ಯಾರಂಟಿ ಹಬ್ಬ ನಾಲ್ಕನೇ ವರ್ಷಕ್ಕೆ ಪಾದಾರ್ಪಣೆ, ಸಮರ್ಪಣೆ, ಸಂಕಲ್ಪ, ಮತ್ತಷ್ಟು ಜನಪರ ಸೇವೆಯ ಪ್ರತಿಜ್ಞೆ ಎಂದು ಪತ್ರಿಕೆಗಳಿಗೆ ದೊಡ್ಡ ದೊಡ್ಡ ಜಾಹೀರಾತು ನೀಡಿದ್ದಾರೆ. ನಾನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನೇರವಾಗಿ ಪ್ರಶ್ನೆ ಮಾಡುತ್ತೇನೆ, ಯಾವ ಪುರುಷಾರ್ಥಕ್ಕೆ ಈ ಸಾಧನಾ ಸಮಾವೇಶ ಮಾಡುತ್ತಿದ್ದೀರಿ? ಕಳೆದ ಮೂರು ವರ್ಷಗಳಲ್ಲಿ ತಾವು ಮಾಡಿದ ಸಾಧನೆಯಾದರೂ ಏನು ರಾಜ್ಯದಲ್ಲಿ ಏನಾದರೂ ಹೊಸ ಯೋಜನೆಗಳನ್ನು ತಂದಿದ್ದೀರಾ?" ಎಂದು ಪ್ರಶ್ನಿಸಿದರು.

"ಅತಿ ಹೆಚ್ಚು ಬಾರಿ ಬಜೆಟ್ ಮಂಡಿಸಿದ, ಸುದೀರ್ಘ ಕಾಲ ಮುಖ್ಯಮಂತ್ರಿಯಾದ ಹೆಗ್ಗಳಿಕೆ ಸಿದ್ದರಾಮಯ್ಯ ಅವರದ್ದು. ಆದರೆ, ಅಹಿಂದ ವರ್ಗವನ್ನು ಕೇವಲ ದುರ್ಬಳಕೆ ಮಾಡಿಕೊಂಡು ಅಧಿಕಾರ ಅನುಭವಿಸುತ್ತಿದ್ದಾರೆ. ಸಿದ್ದರಾಮಯ್ಯ ಅವರ ಆಡಳಿತದ ಪರಿಸ್ಥಿತಿ ನೋಡಿದರೆ, ಅವರು 'ಮನೆಗೆ ಮಗನೂ ಆಗಲಿಲ್ಲ, ಊರಿಗೆ ಉಪಕಾರಿಯೂ ಆಗಲಿಲ್ಲ' ಎನ್ನುವಂತಾಗಿದೆ. ಇಡೀ ರಾಜ್ಯವನ್ನು ಸಾಲದ ಶೂಲಕ್ಕೆ ನೂಕಿ ಅರಾಜಕತೆ ಸೃಷ್ಟಿಸಿದ್ದಾರೆ. ಎಂದು ಬಿ.ವೈ. ವಿಜಯೇಂದ್ರ ದೂರಿದರು.

ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಮೂಲಭೂತ ಸೌಕರ್ಯಗಳು ಸಂಪೂರ್ಣ ಕುಸಿದುಬಿದ್ದಿವೆ. ನೀರಾವರಿಗೆ ಹಣ ಕೊಟ್ಟಿಲ್ಲ, ಆಸ್ಪತ್ರೆ ಮತ್ತು ಶಾಲೆಗಳಿಗೆ ಆದ್ಯತೆ ನೀಡಿಲ್ಲ. ಶಾಸಕರ ಕ್ಷೇತ್ರಗಳಿಗೆ ಕಿಂಚಿತ್ತೂ ಅನುದಾನ ನೀಡಿಲ್ಲ. ನಿಮ್ಮ ಯೋಗ್ಯತೆಗೆ ಒಂದು ರಸ್ತೆ ಗುಂಡಿ ಮುಚ್ಚಲು ಸಾಧ್ಯವಾಗಿಲ್ಲ. 2ನೇಪುಟಕ್ಕೆ

## ರಾಜ್ಯ ಸಣ್ಣ ನೀರಾವರಿ ಸಚಿವರಿಂದ ತಾಲೂಕಿನಾಧ್ಯಂತ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣಕ್ಕೆ ಚಾಲನೆ: ಶಿವಕುಮಾರ .ಬಿ.ಕೆ.

ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಪತ್ರಿಕಾ ಭವನದಲ್ಲಿ ಮಾನ್ವಿ ಪ್ರಜ್ಞಾವಂತ ನಾಗರಿಕರ ವೇದಿಕೆಯ ಸಂಚಾಲಕರಾದ ಶಿವಕುಮಾರ .ಬಿ.ಕೆ. ಮಾತನಾಡಿ ರಾಜ್ಯ ಸಣ್ಣ ನೀರಾವರಿ ಸಚಿವರಾದ ಎನ್.ಎಸ್.ಬೋಸರಾಜು ತಾಲೂಕಿನ ವಿವಿಧ ಗ್ರಾಮಗಳಲ್ಲಿ 40 ಕ್ಕೂ ಹೆಚ್ಚು ಬ್ರಿಡ್ಜ್ ಕಂ ಬ್ಯಾರೇಜ್ ಹಾಗೂ ಚೆಕ್ ಡ್ಯಾಂಗಳ ನಿರ್ಮಾಣಕ್ಕೆ ತಮ್ಮ ಇಲಾಖೆಯಿಂದ ಅನುದಾನ ನೀಡಿದ್ದಾರೆ ಹಾಗೂ ಪ್ರಮುಖವಾಗಿ ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕೊರವಿ ಮತ್ತು ಮಾನ್ವಿ ರಸ್ತೆಯಲ್ಲಿನ ಹಿರೇಹಳ್ಳಕ್ಕೆ ನಿರ್ಮಿಸಲಾಗುತ್ತಿರುವ ಬ್ರಿಡ್ಜ್ ಕಂ ಬ್ಯಾರೇಜ್, ರಬ್ಬಣಕಲ್ ನಿಂದ ಕೊರವಿ ಹಳ್ಳಕ್ಕೆ ನಿರ್ಮಿಸಲಾಗುತ್ತಿರುವ ಬ್ರಿಡ್ಜ್ ಕಂ ಬ್ಯಾರೇಜ್, ಕಾತರಕಿಯಲ್ಲಿ ನಿರ್ಮಿಸಲಾಗುತ್ತಿರುವ ಬ್ರಿಡ್ಜ್ ಕಂ ಬ್ಯಾರೇಜ್, ಮಾನ್ವಿ ಪಟ್ಟಣದ ಆರ್.ಜಿ.ಕ್ಯಾಂಪ್ ಹತ್ತಿರದ ಹಳ್ಳಕ್ಕೆ ನಿರ್ಮಿಸಲಾಗುತ್ತಿರುವ ಬ್ರಿಡ್ಜ್ ಕಂ ಬ್ಯಾರೇಜ್




ನಿಂದಾಗಿ ಈ ಭಾಗದ ಸುತ್ತ ಮುತ್ತ ಗ್ರಾಮಗಳ ಜನರ ಸಂಚಾರಕ್ಕೆ ಅನುಕೂಲವಾಗುತ್ತದೆ ಹಾಗೂ ಬ್ರಿಡ್ಜ್ ಕಂ ಬ್ಯಾರೇಜ್ ನಿಂದಾಗಿ ನೀರು ಸಾದಕಾಲ ನಿಲ್ಲವುದರಿಂದ ಈ ಭಾಗದಲ್ಲಿ ಅಂತರ್ಜಲ ಮಟ್ಟ ಸುಧಾರಣೆಯಾಗಲಿದೆ. ಹಾಗೂ 2ನೇಪುಟಕ್ಕೆ

## ಎರಡು ತಿಂಗಳು ಕಳೆದರೂ ಬಾರದ ವಿಶೇಷ ಚೇತನರ ಪಿಂಚಣಿ: ಹಣ ಬಿಡುಗಡೆಗೆ ರಮೇಶ್ ಬಂಡಾರಿ ಒತ್ತಾಯ

ಧೈರ್ಯದ ದಾರಿ

**ಸಿರವಾರ:** ಇಡೀ ರಾಜ್ಯಾದ್ಯಂತ ವಿಶೇಷ ಚೇತನರಿಗೆ ಬರಬೇಕಾದ ಮಾಸಿಕ ಪಿಂಚಣಿ ಹಣ ಕಳೆದ ಎರಡು ತಿಂಗಳಿನಿಂದ ಬಾರದೇ ಇರುವುದರಿಂದ, ವಿಕಲಚೇತನರು ಹಾಗೂ ಅವರ ಕುಟುಂಬಗಳು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿವೆ. ಆದ್ದರಿಂದ ಸರ್ಕಾರ ತಕ್ಷಣವೇ ಬಾಕಿ ಇರುವ ಪಿಂಚಣಿ ಹಣವನ್ನು ಬಿಡುಗಡೆ ಮಾಡಬೇಕು ಎಂದು ರಮೇಶ್ ಬಂಡಾರಿ ಒತ್ತಾಯಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, "ರಾಜ್ಯದಲ್ಲಿ ಈಗಾಗಲೇ 600, 800, 1400 ಹಾಗೂ 2000 ಪಿಂಚಣಿ ಹಣದ ಆಧಾರದ ಮೇಲೆಯೇ ಜೀವನ ಸಾಗಿಸುತ್ತಿರುವ ಸಾವಿರಾರು ವಿಕಲಚೇತನರಿದ್ದಾರೆ. ಆದರೆ ಕಳೆದ ಎರಡು ತಿಂಗಳಿಂದ ಪಿಂಚಣಿ ಬಾರದೆ ಇರುವುದರಿಂದ ಅವರ ಬದುಕು ದುಸ್ತರವಾಗಿದೆ. ಅನೇಕ ವಿಕಲಚೇತನರು ವಿವಿಧ ಕಾಯಿಲೆಗಳಿಂದ ಬಳಲುತ್ತಿದ್ದು, ನಿಯಮಿತವಾಗಿ ಔಷಧೋಪ 'ಚಾರಗಳನ್ನು ಪಡೆದುಕೊಳ್ಳಲು ಹಣವಿಲ್ಲದೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ," ಎಂದು ಕಳವಳ ವ್ಯಕ್ತಪಡಿಸಿದರು.

"ಬರುವ ಅಲ್ಪಸ್ವಲ್ಪ ಪಿಂಚಣಿಯನ್ನೇ ನಂಬಿ ಜೀವನ ಸಾಗಿಸುವ ಸಾಕಷ್ಟು ವಿಕಲಚೇತನರ ಕುಟುಂಬಗಳು ಇಂದು ಬೀದಿಗೆ ಬರುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದಕ್ಕೆ ಸರ್ಕಾರ ಮತ್ತು ಸಂಬಂಧಪಟ್ಟ ಅಧಿಕಾರಿಗಳ ನಿರ್ಲಕ್ಷ್ಯವೇ ನೇರ ಕಾರಣ ಎಂದರೆ ತಪ್ಪಾಗಲಾರದು. ಸರ್ಕಾರ ತಕ್ಷಣವೇ ಎಚ್ಚೆತ್ತುಕೊಂಡು ಬಾಕಿ ಇರುವ ಸಂಪೂರ್ಣ ಪಿಂಚಣಿ ಹಣವನ್ನು ಬಿಡುಗಡೆ ಮಾಡಬೇಕು. ಆ ಮೂಲಕ ವಿಕಲಚೇತನರು ನೆಮ್ಮದಿಯಿಂದ ಜೀವನ ಸಾಗಿಸಲು ಮತ್ತು ಆರೋಗ್ಯ ಕಾಪಾಡಿಕೊಳ್ಳಲು ಅನುಕೂಲ ಮಾಡಿಕೊಡಬೇಕು," ಎಂದು ಅವರು ಮಾನ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ.

## ಕುರ್ಡಿ ಗ್ರಾಮದಲ್ಲಿ ಆರೋಗ್ಯ ಇಲಾಖೆಯಿಂದ ಗರ್ಭಿಣಿ ಮಹಿಳೆಯರಿಗೆ ಆರೋಗ್ಯ ಜಾಗೃತಿ

ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಕುರ್ಡಿ ಗ್ರಾಮದಲ್ಲಿ ಜಿಲ್ಲಾ ಐಇಸಿ ತಂಡ ಹಾಗೂ ಕುರ್ಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರಾದ ಡಾ.ಸೌಮ್ಯ ನೇತೃತ್ವದಲ್ಲಿ ಗ್ರಾಮದಲ್ಲಿ ಗರ್ಭಿಣಿ ಮಹಿಳೆಯರ ನಿವಾಸಗಳಿಗೆ ಭೇಟಿ ನೀಡಿ ಗರ್ಭಿಣಿ ಮಹಿಳೆಯರ ಆರೋಗ್ಯ ವಿಚಾರಿಸಿ ಮಾಹಿತಿ ಪಡೆದು ಕುರ್ಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರಾದ ಡಾ.ಸೌಮ್ಯ ಮಾತನಾಡಿ ಗ್ರಾಮದ ಸರಕಾರಿ ಆರೋಗ್ಯ ಕೇಂದ್ರದಲ್ಲಿ ಗರ್ಭಿಣಿಯರಿಗೆ ಉಚಿತ ಆರೋಗ್ಯ ತಪಾಸಣೆಯ ಜೋತೆಗೆ ಅಗತ್ಯ ಸೂಕ್ತ ಚಿಕಿತ್ಸೆಯನ್ನು ಕೂಡ ನೀಡಲಾಗುತ್ತಿದು ಗರ್ಭಿಣಿ ಮಹಿಳೆಯರು ನಿಯುಮಿತವಾಗಿ ಆರೋಗ್ಯ ತಪಾಸಣೆ ಮಾಡಿಕೊಂಡು ಅಗತ್ಯ ಚಿಕಿತ್ಸೆ ಪಡೆದಲ್ಲಿ ಗರ್ಭಿಣಿ ತಾಯಂದಿರು ಹಾಗೂ ಗರ್ಭದಲ್ಲಿನ ಮಗು ಆರೋಗ್ಯವಾಗಿರುವುದಕ್ಕೆ ಸಾಧ್ಯವಾಗುತ್ತದೆ ಪಾಲಕರು ತಮ್ಮ ಕುಟುಂಬದಲ್ಲಿನ ಗರ್ಭಿಣಿ ತಾಯಂದಿರಲ್ಲಿ ಗರ್ಭಿಣಿ ಅವಧಿಯಲ್ಲಿ ಕಾಲುಬಾವು ಸೇರಿದಂತೆ, ಎತ್ತರ ಕಡಿಮೆ, ಮದುವೆಯಾದ 5 ವರ್ಷಗಳ ನಂತರ



ಗರ್ಭಿಣಿಯಾದಲ್ಲಿ, ತೀವ್ರ ರಕ್ತಹೀನತೆ, ಮೊದಲ ಹೆರಿಗೆ ಸಿಜೇರಿಯನ್, ಚೊಚ್ಚಲು ಹೆರಿಗೆ, ಅಧಿಕ ರಕ್ತದೊತ್ತಡ ಇದ್ದ ಸಂದರ್ಭಗಳಲ್ಲಿ ಹೆಚ್ಚಿನ ಕಾಳಜಿಯನ್ನು ವಹಿಸಬೇಕು. ರಕ್ತಹೀನತೆ ಕಂಡು ಬಂದಲ್ಲಿ ಸರಕಾರಿ ಆಸ್ಪತ್ರೆಗಳಲ್ಲಿ ನೀಡುವ ಇದ್ದಲ್ಲಿ ಐಎಫ್ಎ ಮಾತ್ರೆ, ಐರನ್ ಸುಕ್ರೋಸ್, ರಕ್ತ ಹಾಕಿಸುವಿಕೆ ಮೂಲಕ ರಕ್ತಹಿನತೆಯನ್ನು ತಡೆಯಬಹುದು ಸುಧಾರಣೆಯಾಗದಿದ್ದಲ್ಲಿ ಹೆಚ್ಚಿನ ಚಿಕಿತ್ಸೆಗಾಗಿ ತಜ್ಞ ವೈದ್ಯರಲ್ಲಿಗೆ ಕಳುಹಿಸಿ ಕೊಡಲಾಗುವುದು, ಗರ್ಭಿಣಿಯರು ವೈದ್ಯರ ಬಳಿ ತಪಾಸಣೆಗೆ ಬರುವಾಗ ತಾಯಿಕಾರ್ಡ್ ತಪ್ಪದೆ ತರಬೇಕು 2ನೇಪುಟಕ್ಕೆ►

## ಜೂನ್ 20 ರಿಂದ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಆರಂಭ: ಜಿಲ್ಲಾ ಚುನಾವಣಾಧಿಕಾರಿ ಎಸ್.ಪೂವಿತಾ

ಧೈರ್ಯದ ದಾರಿ

**ರಾಯಚೂರು ಮೇ.19:** ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) ಮೂರನೇ ಹಂತದಲ್ಲಿ ಕರ್ನಾಟಕ ರಾಜ್ಯದಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಪಟ್ಟಿ ತಯಾರಿಸುವ ಕುರಿತು ವೇಳಾಪಟ್ಟಿ ಪ್ರಕಟಿಸಿದ್ದು, ರಾಯಚೂರು ಜಿಲ್ಲೆಯಲ್ಲಿ ಜೂನ್ 20 ರಿಂದ ಪ್ರಕ್ರಿಯೆಯು ಆರಂಭವಾಗಲಿದ್ದು ಅಕ್ಟೋಬರ್ 7ಕ್ಕೆ ಮುಕ್ತಾಯವಾಗಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಎಸ್.ಪೂವಿತಾ ಅವರು ತಿಳಿಸಿದ್ದಾರೆ.




ದಿನಾಂಕ:01.10.2026 ಅನ್ನು ಅರ್ಹತಾ ದಿನಾಂಕವನ್ನಾಗಿ ಪರಿಗಣಿಸಿ ಈ ವಿಶೇಷ ಸಮಗ್ರ ಮತದಾರರ ಪರಿಷ್ಕರಣೆ ಕಾರ್ಯ ನಡೆಯಲಿದೆ. ಜೂನ್ 20 ರಿಂದ 29ರವರೆಗೆ ಈ ಪ್ರಕ್ರಿಯೆಯ ಸಿದ್ಧತೆ, ಪ್ರಕ್ರಿಯೆಯ ಭಾಗವಾಗಿರುವ ಎಲ್ಲಾ ಹಂತದ ಅಧಿಕಾರಿ/ ಸಿಬ್ಬಂದಿಗಳಿಗೆ ತರಬೇತಿ, ಅವಶ್ಯವಿರುವ ದಾಖಲೆಗಳ ಮುದ್ರಣ ಕಾರ್ಯ ಜರುಗಲಿದೆ. ತದನಂತರ ಜೂನ್ 30 ರಿಂದ ಜುಲೈ 29ರವರೆಗೆ ಈ ಜಿಲ್ಲೆಯ 07 ವಿಧಾನ ಸಭಾ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು 1853 ಮತಗಟ್ಟೆ ಮಟ್ಟದ ಅಧಿಕಾರಿಗಳು(ಬಿ.ಎಲ್.ಓ.ಗಳು) ಮನೆ-ಮನೆಗೆ ಭೇಟಿ ನೀಡಿ ಮತದಾರರಿಗೆ ಎಣಿಕೆ ನಮೂನೆಗಳನ್ನು ನೀಡಿ ಮಾಹಿತಿಯನ್ನು ಸಂಗ್ರಹಿಸುವರು, ದಿನಾಂಕ:05.08.2026 ರಂದು ಈ ಪ್ರಕ್ರಿಯೆಯ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ.

ಕರಡು ಮತದಾರರ ಪಟ್ಟಿಗೆ ಆಗಸ್ಟ್ 2ನೇಪುಟಕ್ಕೆ

ಮೊದಲನೇ ಪುಟದಿಂದ

# ಸಾಧನಾ ಸಂಭ್ರಮ: 1.52 ಲಕ್ಷ ಮಂದಿಗೆ ಹಕ್ಕುಪತ್ರ ವಿತರಣೆ

ಆಗಮಿಸಿ ಜಿಲ್ಲಾಡಳಿತಕ್ಕೆ ಪ್ರದಾನ ಮಾಡಿದರು. ಅಧಿಕಾರಿಗಳಿಗೆ ಪ್ರಶಂಸನಾ ಪತ್ರ ವಿತರಣೆ: ಕಂದಾಯ ಇಲಾಖೆಯಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿರುವ ಗ್ರಾಮ ಆಡಳಿತ ಅಧಿಕಾರಿ, ಕಂದಾಯ ನಿರೀಕ್ಷಕರು, ಉಪ ತಹಶೀಲ್ದಾರರು, ತಹಶೀಲ್ದಾರರು ಹಾಗೂ ಭೂಮಾಪನಾ ಇಲಾಖೆಯ ಸರ್ವೆಯರ್‌ಗಳು, ಸಹಾಯಕ ಭೂ ದಾಖಲೆಗಳ ಉಪನಿರ್ದೇಶಕರುಗಳಿಗೆ ಪ್ರಶಂಸನಾ ಪತ್ರವನ್ನು ವಿತರಿಸಲಾಯಿತು.
ಸಮಾವೇಶ ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 3 ವರ್ಷ ತುಂಬಿದೆ. ಈ ಮೂರುಗಳಲ್ಲಿ ನಮ್ಮ ಸರ್ಕಾರದ ಎಲ್ಲಾ ವರ್ಗದ ಬಡವರು, ಶೋಷಿತರ ಗ್ಯಾರಂಟಿ ಯೋಜನೆಗಳು ಸೇರಿದಂತೆ ಅಗತ್ಯ ಸವಲತ್ತು ಪ್ರಾಮಾಣಿಕವಾಗಿ ವಿತರಿಸಿದೆ. ಯಾವುದೇ ಸರ್ಕಾರ ಇದುವರೆಗೂ ಜಾರಿಗೊಳಿಸದ ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ, ಶಕ್ತಿ ಯೋಜನೆ ಸೇರಿದಂತೆ ಪಂಚ ಗ್ಯಾರಂಟಿಗಳನ್ನು ಜನರಿಗೆ ನೀಡುತ್ತಿದೆ ಎಂದರು.

ರಾಜ್ಯದಲ್ಲಿ ನಡೆದ ದಾವಣಗೆರೆ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿಗಳನ್ನು ಆ ಕ್ಷೇತ್ರದ ಮತದಾರರು ಗೆಲ್ಲಿಸಿದ್ದಾರೆ. ಇದು ನಮ್ಮ ಸರ್ಕಾರದ ಬದ್ಧತೆ, ಬಡವರ ಪರ ಇದೆ ಎಂಬುದನ್ನು ಪ್ರತಿಬಿಂಬಿಸುತ್ತದೆ ಎಂದು ಅವರು ಹೇಳಿದರು.
ನಾವು ನುಡಿದಂತೆ ನಡೆದಿದ್ದೇವೆ. ಮುಂದೆಯೂ ನಡೆಯುತ್ತೇವೆ. ರಾಜ್ಯದ ಜನತೆ ಮುಂದಿನ ಚುನಾವಣೆಗಳಲ್ಲಿ ನಮ್ಮ ಪಕ್ಷವನ್ನು ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಗೃಹ ಸಚಿವ ಡಾ. ಜಿ. ಪರಮೇಶ್ವರ್ ಮಾತನಾಡಿ, ಕಳೆದ 3 ವರ್ಷಗಳ ಹಿಂದೆ ನಡೆದ ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷ ನನ್ನ ಅಧ್ಯಕ್ಷತೆಯಲ್ಲಿ ಪಕ್ಷದ ಚುನಾವಣಾ ಪ್ರಣಾಳಿಕೆಯನ್ನು ಸಿದ್ಧಪಡಿಸಿತ್ತು. ಐದು ಗ್ಯಾರಂಟಿಗಳೂ ಸೇರಿದಂತೆ ಆದ್ಯತಾ ವಿಷಯಗಳನ್ನು ರಾಜ್ಯದ ಜನತೆಗೆ ಆಶ್ವಾಸನೆ ನೀಡಿ ಚುನಾವಣೆ ಗೆದ್ದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಅಧಿಕಾರಕ್ಕೆ ಬಂದೆವು. ಅಧಿಕಾರಕ್ಕೆ ಬಂದ ಒಂದು ವರ್ಷದೊಳಗೆ ಎಲ್ಲ ಐದೂ ಗ್ಯಾರಂಟಿಗಳನ್ನೂ ಸಮರ್ಪಕವಾಗಿ ಅನುಷ್ಠಾನಗೊಳಿಸಿದ್ದಲ್ಲದೆ ರಾಜ್ಯವನ್ನು ಸರ್ವಾಂಗೀಣ ಅಭಿವೃದ್ಧಿ ಪಥದತ್ತ ಕೊಂಡೊಯ್ಯಲಾಗಿದೆ. ಈ ಮೂಲಕ ನಮ್ಮ ಸರ್ಕಾರ ನುಡಿದಂತೆ ನಡೆದುಕೊಂಡಿದೆ ಎಂದರು.

ಅದ್ದೂರಿ ಸ್ವಾಗತ: ಕಾಂಗ್ರೆಸ್ ಸರ್ಕಾರದ ಸಾಧನಾ ಸಮಾವೇಶಕ್ಕೆ ಆಗಮಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಕೈ ನಾಯಕರುಗಳಿಗೆ ಕಲ್ಪತರುನಾಡಿನಲ್ಲಿ ಅದ್ದೂರಿ ಸ್ವಾಗತ ದೊರೆಯಿತು.
ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕಾರ್ಯಕ್ರಮದ ವೇದಿಕೆ ಹತ್ತುತ್ತಿದ್ದಂತೆ ದೊಡ್ಡ ಸಂಖ್ಯೆಯಲ್ಲಿ ನೆರೆದಿದ್ದ ಜನಸ್ತೋಮದ ಹರ್ಷೋದ್ಗಾರ ಮುಗಿಲು ಮುಟ್ಟಿತು.

ರಾರಾಜಿಸಿದ ಕಟೌಟ್‌ಗಳು: ತುಮಕೂರು ನಗರ ಸಂಪೂರ್ಣ ಕಾಂಗ್ರೆಸ್ ಮಯವಾಗಿದ್ದು, ಬಿ.ಹೆಚ್. ರಸ್ತೆ, ಅಶೋಕ ರಸ್ತೆ, ರಿಂಗ್ ರಸ್ತೆ ಸೇರಿದಂತೆ ಬಹುತೇಕ ರಸ್ತೆಗಳಲ್ಲಿ ಕಾಂಗ್ರೆಸ್ ನಾಯಕರ ಭಾವಚಿತ್ರವುಳ್ಳ ಬೃಹತ್ ಕಟೌಟ್‌ಗಳು, ಫ್ಲೆಕ್ಸ್‌ಗಳು ರಾರಾಜಿಸುತ್ತಿದ್ದವು. ಸಮಾವೇಶಕ್ಕೆ ಆಗಮಿಸಿದ್ದ ಸಹಸ್ರಾರು ಮಂದಿ ಫಲಾನುಭವಿಗಳು ಹಾಗೂ ಜನಸಾಮಾನ್ಯರಿಗೆ ಕಾರ್ಯಕ್ರಮದ ಸ್ಥಳದಲ್ಲೇ ಅಚ್ಚುಕಟ್ಟಾಗಿ ಊಟ, ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿತ್ತು.

ಬಿಗಿ ಭದ್ರತೆ: ಸರ್ಕಾರದ ಸಾಧನಾ ಸಮಾವೇಶದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕಾ ಕ್ರಮವಾಗಿ ಭದ್ರತಾ ಕಾರ್ಯಕ್ಕಾಗಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಸುಮಾರು 3 ಸಾವಿರಕ್ಕೂ ಅಧಿಕ ಪೊಲೀಸರನ್ನು ನಿಯೋಜಿಸಲಾಗಿತ್ತು.
ಸಮಾವೇಶದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರುಗಳಾದ ಕೃಷ್ಣ ಬೈರೇಗೌಡ, ಡಾ. ಹೆಚ್.ಸಿ. ಮಹದೇವಪ್ಪ, ಶಿವಾನಂದ ಪಾಟೀಲ್, ಸತೀಶ್ ಜಾರಕಿಹೊಳಿ, ಪ್ರಿಯಾಂಕ ಖರ್ಗೆ, ಬೈರತಿ ಸುರೇಶ್, ಕೆ.ಜೆ. ಜಾರ್ಜ್, ಕೆ.ಹೆಚ್. ಮುನಿಯಪ್ಪ, ಲಕ್ಷ್ಮೀಹೆಬ್ಬಾಳ್ಕರ್, ವೆಂಕಟೇಶ್, ಆರ್.ಬಿ. ತಿಮ್ಮಾಪುರ, ಶಿವರಾಜ ತಂಗಡಗಿ, ಡಾ. ಎಂ.ಸಿ. ಸುಧಾಕರ್ ಸೇರಿದಂತೆ ಬಹುತೇಕ ಸಚಿವರು ಮಾಜಿ ಸಚಿವ ಕೆ.ಎನ್. ರಾಜಣ್ಣ, ಶಾಸಕರಾದ ಟಿ.ಬಿ. ಜಯಚಂದ್ರ, ಕೆ. ಷಡಕ್ಷರಿ, ಡಾ. ರಂಗನಾಥ್, ಹೆಚ್.ವಿ. ವೆಂಕಟೇಶ್, ಎಸ್.ಆರ್. ಶ್ರೀನಿವಾಸ್, ಆರ್. ರಾಜೇಂದ್ರ, ಡಿ.ಟಿ. ಶ್ರೀನಿವಾಸ್ ಸೇರಿದಂತೆ ಸಚಿವರುಗಳು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಸಂಸದರು, ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

## ರಾಜ್ಯ ಸಣ್ಣ ನೀರಾವರಿ ಸಚಿವರಿಂದ ತಾಲೂಕಿನಾದ್ಯಂತ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣಕ್ಕೆ ಚಾಲನೆ: ಶಿವಕುಮಾರ .ಬಿ.ಕೆ.

ಜಾನುವಾರುಗಳಿಗೆ ಕುಡಿಯುವ ನೀರು ದೊರೆಯುತ್ತದೆ ಅದ್ದರಿಂದ ಕಾಮಗಾರಿಗಳನ್ನು ಬೇಗಾನೆ ಪೂರ್ಣಗೊಳಿಸಿದಲ್ಲಿ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗುತ್ತದೆ ಜೋತೆಗೆ ಬ್ರಿಡ್ಜ್ ಕಂ ಬ್ಯಾರೇಜ್‌ಗೆ ಅಗತ್ಯ ಸಂಪರ್ಕ ರಸ್ತೆ ನಿರ್ಮಿಸಿದಲ್ಲಿ ಸಾರ್ವಜನಿಕರ ಸಂಚಾರಕ್ಕೆ ಅನುಕೂಲವಾಗುತ್ತದೆ ಮಾನ್ವಿ ತಾಲೂಕಿನಿಂದ ಮುಖ್ಯ ನಗರಗಳಿಗೆ ಹೋಗುವುದಕ್ಕೆ ಅನುಕೂಲವಾಗುವುದರಿಂದ ಈ ಭಾಗದ ಆರ್ಥಿಕ ಪ್ರಗತಿಗೆ ಸಾಹಕಾರಿಯಾಗುತ್ತದೆ ಕಾಮಗಾರಿ ಪೂರ್ಣಗೊಂಡ ನಂತರ ಉದ್ಘಾಟನೆ ಮಾಡುವ ಕಾರ್ಯಕ್ರಮದ ಸಮಯದಲ್ಲಿ ಜನರಿಗೆ ಅನುಕೂಲ ಮಾಡಿಕೊಟ್ಟಿರುವುದಕ್ಕಾಗಿ ಮಾನ್ವಿ ಪ್ರಜ್ಞಾವಂತ ನಾಗರಿಕರ ವೇದಿಕೆಯ ವತಿಯಿಂದ ರಾಜ್ಯ ಸಚಿವರಾದ ಎನ್.ಎಸ್.ಬೋಸರಾಜು ಹಾಗೂ ರಾಯಚೂರು ಗ್ರಾಮೀಣ ಶಾಸಕರಾದ ಬಸವನಗೌಡ ದದ್ದಲ್ ರವರನ್ನು ಸನ್ಮಾನಿಸಿ ಗೌರವಿಸಲಾಗುವುದು ಎಂದು ತಿಳಿಸಿದರು.
ಲಕ್ಷ್ಮಣ ಕೋನಾಪುರ ಪೇಟೆ, ಹನುಮಂತ ಕೊರವಿ ಇದ್ದರು.

## ಕುರ್ಡಿ ಗ್ರಾಮದಲ್ಲಿ ಆರೋಗ್ಯ ಇಲಾಖೆಯಿಂದ ಗರ್ಭಿಣಿ ಮಹಿಳೆಯರಿಗೆ ಆರೋಗ್ಯ ಜಾಗೃತಿ

ಎಂದು ತಿಳಿಸಿದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ.ಹೆಚ್.ದಾಸಪ್ಪನವರ್ ಮಾತನಾಡಿ ಗರ್ಭಿಣಿ ಮಹಿಳೆಯ ಮೊದಲ ಹೆರಿಗೆ ಶಸ್ತ್ರಚಿಕಿತ್ಸೆ ಮೂಲಕವಾದಲ್ಲಿ ಕನಿಷ್ಟ 3 ವರ್ಷಕ್ಕೆ ಪುನಃ ಗರ್ಭಿಣಿಯಾಗುವ ಅವಧಿಯನ್ನು ಕಡ್ಡಾಯವಾಗಿ ಮುಂದುಡುವುದಕ್ಕೆ ತಾತ್ಕಾಲಿಕ ಕುಟುಂಬ ಕಲ್ಯಾಣ ವಿಧಾನಗಳಾದ ಅಂತರ ಚುಚ್ಚುಮದ್ದು, ಕಾಪರ-ಟಿ, ನೀರೊಧ ಸೇರಿದಂತೆ ಸೂಕ್ತ ವಿಧಾನಗಳನ್ನು ಅನುಸರಿಸುವುದರಿಂದ ತಾಯಿ ಮತ್ತು ಮಗುವಿನ ಆರೋಗ್ಯ ಕಾಪಾಡಬಹುದು ಎಂದು ತಿಳಿಸಿದರು.

ಗ್ರಾಮದ ಮನೆಮನೆಗೆ ಭೇಟಿ ನೀಡಿ ಸಾರ್ವಜನಿಕರಿಗೆ ಸರಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ನೀಡುವ ಹೆಚ್‌ಪಿವಿ ಲಸಿಕೆ, ಬೇಸಿಗೆ ಮುಂಜಾಗ್ರತೆ, ಏಡ್ಸ್, ಕ್ಷಯರೋಗ, ಕುಷ್ಠರೋಗ ಮಾನಸಿಕ ಆರೋಗ್ಯದ ಉಚಿತ ಸಲಹೆಗಾಗಿ 14416 ಕರೆ ಮಾಡುವಂತೆ ಮಾಹಿತಿ ನೀಡಲಾಯಿತು.
ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ರಾಜೇಂದ್ರ, ಆರೋಗ್ಯ ನಿರೀಕ್ಷಣಾಧಿಕಾರಿ ಅನೀಲ್‌ಕುಮಾರ್, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಸುಜಾತಾ, ಆಶಾ ಕಾರ್ಯಕರ್ತೆ ಶೀಲ್ಪಾ, ಇದ್ದರು.

## ಜೂನ್ 20 ರಿಂದ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಆರಂಭ: ಜಿಲ್ಲಾ ಚುನಾವಣಾಧಿಕಾರಿ ಎಸ್.ಪೂವಿತಾ

5 ರಿಂದ ಸೆಪ್ಟೆಂಬರ್ 4ರವರೆಗೆ ಆಕ್ಷೇಪಣೆಗಳನ್ನು ಆಹ್ವಾನಿಸಿ ಅಕ್ಟೋಬರ್ 3ರೊಳಗೆ ಆಕ್ಷೇಪಣೆಗಳನ್ನು ವಿಲೇವಾರಿ ಮಾಡಿ ಕೊನೆಗೆ ಅಕ್ಟೋಬರ್ 7ಕ್ಕೆ ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ.

ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ವೇಳಾ ಪಟ್ಟಿಯನ್ವಯ ಸದರಿ ಪ್ರಕ್ರಿಯೆಯ ಎಲ್ಲಾ ಕಾರ್ಯವನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಜಿಲ್ಲೆಯ ಎಲ್ಲಾ 7 ವಿಧಾನ ಸಭಾ ಮತಕ್ಷೇತ್ರಗಳ ಮತದಾರರ ನೋಂದಣಾಧಿಕಾರಿಗಳಿಗೆ ಈಗಾಗಲೇ ನಿರ್ದೇಶನ ನೀಡಲಾಗಿದೆ. ಇದಲ್ಲದೆ ಭಾರತ ಚುನಾವಣಾ ಆಯೋಗದ ನಿರ್ದೇಶನ ಹಾಗೂ ಸುತ್ತೋಲೆಗಳನ್ವಯ ವಿಧಾನಸಭಾ ಮತಕ್ಷೇತ್ರವಾರು ಮತಗಟ್ಟೆ ಮಟ್ಟದ ಏಜೆಂಟರನ್ನು (ಬಿಎಲ್‌ಎ) ನೇಮಕ ಮಾಡುವ ಕುರಿತು ನೋಂದಾಯಿತ ರಾಜಕೀಯ ಪಕ್ಷದವರಿಗೂ ತಿಳಿಸಲಾಗಿದೆ. ಎಸ್.ಐ.ಆರ್ ಕುರಿತು ಸಾರ್ವಜನಿಕರಲ್ಲಿ ಯಾವುದೇ ರೀತಿ ಗೊಂದಲಗಳಿದ್ದಲ್ಲಿ ಆಯಾ ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿಗಳನ್ನು ಸಂಪರ್ಕಿಸುವಂತೆ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಎಸ್.ಪೂವಿತ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳೆಹಾನಿ ಪರಿಹಾರ: ಆಕ್ಷೇಪಣೆಗೆ ಅರ್ಜಿ ಆಹ್ವಾನ

**ರಾಯಚೂರು ಮೇ.19 :** ಜಿಲ್ಲೆಯಲ್ಲಿ 2026-27ನೇ ಸಾಲಿನ ಏಪ್ರಿಲ್-2026 ಮಾಹೆಯ ದಿನಾಂಕ:19-04-2026ರಂದು ಸುರಿದ ಅಕಾಲಿಕ ಗಾಳಿ ಮಳೆಯಿಂದ ಜಿಲ್ಲೆಯ ಲಿಂಗಸೂಗೂರು, ಮಸ್ಕಿ ಹಾಗೂ ಸಿರವಾರ್ ತಾಲೂಕುಗಳಲ್ಲಿ ಕೃಷಿ ಹಾಗೂ ತೋಟಗಾರಿಕೆ ಬೆಳೆಗೆ ಉಂಟಾದ ಹಾನಿಗೆ ಜಿಲ್ಲಾಡಳಿತದಿಂದ ಪರಿಹಾರ ನೀಡಲಾಗುತ್ತಿದ್ದು, ರೈತರಿಂದ ಆಕ್ಷೇಪಣೆಗಳಿದ್ದಲ್ಲಿ ಲಿಖಿತ ಮೂಲಕ ಆಕ್ಷೇಪಣೆಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಎಸ್.ಪೂವಿತಾ ಅವರು ತಿಳಿಸಿದ್ದಾರೆ.
ಸಿರವಾರ ತಾಲೂಕಿನಲ್ಲಿ 1.00 ಹೆಕ್ಟರ್ ತೋಟಗಾರಿಕೆ ಕೃಷಿ, ಲಿಂಗಸುಗೂರು ತಾಲೂಕಿನಲ್ಲಿ 2.40 ಹೆಕ್ಟರ್ ತೋಟಗಾರಿಕೆ ಕೃಷಿ ಹಾಗೂ 15.60 ಹೆಕ್ಟರ್ ಇತರೆ ಕೃಷಿ, ಮಸ್ಕಿ ತಾಲೂಕಿನಲ್ಲಿ 1.60 ಹೆಕ್ಟರ್ ತೋಟಗಾರಿಕೆ ಕೃಷಿ ಪ್ರದೇಶದಲ್ಲಿ ಹಾನಿಯಾಗಿದ್ದು, ಒಟ್ಟು ಹೆಕ್ಟರ್ ಕ್ಷೇತ್ರಗಳಲ್ಲಿ ಜಂಟಿ ಸಮೀಕ್ಷೆಯ ಪರಿಶೀಲನಾ ವರದಿಯಂತೆ ಬೆಳೆ ಹಾನಿಯಾದ ರೈತರ ಪಟ್ಟಿಯನ್ನು ಜಿಲ್ಲಾಧಿಕಾರಿಗಳ, ಉಪ ವಿಭಾಗಾಧಿಕಾರಿಗಳ, ತಹಶೀಲ್ದಾರರ, ಗ್ರಾಮ ಪಂಚಾಯತ, ರೈತ ಸಂಪರ್ಕ ಕೇಂದ್ರಗಳಲ್ಲಿ ಪ್ರಕಟಿಸಲಾಗಿದೆ. ಈ ಕುರಿತು ಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ ತಮ್ಮ ಲಿಖಿತ ಆಕ್ಷೇಪಣೆಗಳನ್ನು ಸಂಬಂಧಿಸಿದ ತಹಶೀಲ್ದಾರ್/ಕೃಷಿ/ತೋಟಗಾರಿಕೆ ಇಲಾಖೆಗಳ ತಾಲ್ಲೂಕು ಕಚೇರಿಗಳಲ್ಲಿ ಅಥವಾ ಸಂಬಂಧಿಸಿದ ರೈತ ಸಂಪರ್ಕ ಕೇಂದ್ರಗಳಲ್ಲಿ 07 ದಿನಗಳ ಒಳಗಾಗಿ ಸಲ್ಲಿಸಬಹುದಾಗಿದೆ.
ಈ ಅವಧಿಯಲ್ಲಿ ಯಾವುದೇ ಆಕ್ಷೇಪಣೆಗಳು ಸಲ್ಲಿಕೆಯಾಗಿಲ್ಲ. ಎಂದಾದಲ್ಲಿ ಪಟ್ಟಿಯನ್ನು ಅಂತಿಮಗೊಳಿಸಿ ನಿಯಮಾನುಸಾರ ಪರಿಹಾರ ಪಾವತಿಸಲು ಕ್ರಮವಹಿಸಲಾಗುವುದು ಎಂದು ಜಿಲ್ಲಾಧಿಕಾರಿಗಳಾದ ಎಸ್.ಪೂವಿತಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ.22ರಂದು ಯರಗೇರಾ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

**ರಾಯಚೂರು ಮೇ.19 :** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ಯರಗೇರಾ ವಿದ್ಯುತ್ ಉಪ ಕೇಂದ್ರದ ವ್ಯಾಪ್ತಿಗೆ ಬರುವ ವೈ.ಮಲ್ಲಾಪುರ ಎನ್ ಜೆ ವೈ, ಎಲ್.ಕೆ.ದೊಡ್ಡಿ, ಜಂಬಲದಿನ್ನಿ ಫೀಡರ್‌ಗಳಲ್ಲಿ ತುರ್ತು ನಿರ್ವಹಣ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಮೇ.22ರ ಬೆಳಿಗ್ಗೆ 10ರಿಂದ ಸಂಜೆ 5:00 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎರಡು, ಮೂರು ದಿನಗಳಲ್ಲಿ ಫಲಾನುಭವಿಗಳ ಖಾತೆಗೆ ಗೃಹಲಕ್ಷ್ಮೀ ಹಣ ಜಮೆ: ಪಾಮಯ್ಯ ಮುರಾರಿ

**ರಾಯಚೂರು ಮೇ.19:** ಗೃಹಲಕ್ಷ್ಮೀ ಯೋಜನೆಯಡಿಯಲ್ಲಿ 2026-27ನೇ ಸಾಲಿನ ಒಂದನೇ ಕಂತಿನ ಅನುದಾನದಲ್ಲಿ ರಾಯಚೂರು ಜಿಲ್ಲೆಯ 4,37,915 ಫಲಾನುಭವಿಗಳಿಗೆ 87,58,30,000 ರೂ. (ಎಂಬತ್ತೇಳು ಕೋಟಿ ಐವತ್ತೆಂಟು ಲಕ್ಷದ ಮೂವತ್ತು ಸಾವಿರ ರೂಪಾಯಿಗಳನ್ನು) ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ರಾಯಚೂರು ಇವರ ಮೂಲಕ ಡಿಬಿಟಿ ಪ್ರಕ್ರಿಯೆ ಚಾಲ್ತಿ ಮಾಡಲಾಗಿದ್ದು, ಮುಂದಿನ ಎರಡು ಮೂರು ದಿನಗಳಲ್ಲಿ ಫಲಾನುಭವಿಗಳ ಖಾತೆಗೆ ಹಣ ಜಮಾವಾಗುತ್ತದೆ ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ.21, 22ರಂದು ಐಟಿಐ ಕ್ಯಾಂಪಸ್ ಸೆಲೆಕ್ಷನ್

**ರಾಯಚೂರು ಮೇ.19:** ರಾಯಚೂರಿನ ಮಾಣಿಕ ನಗರದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2026-27ನೇ ಸಾಲಿನಲ್ಲಿ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ (ಬಿಇಎಲ್) ಬೆಂಗಳೂರು ಇವರ ವತಿಯಿಂದ ಶಿಶಿಕ್ಷು ತರಬೇತಿಗಾಗಿ ಕ್ಯಾಂಪಸ್ ಸೆಲೆಕ್ಷನ್ ಕಾರ್ಯಕ್ರಮವನ್ನು ಮೇ.21 ಹಾಗೂ 22ರ ಬೆಳಿಗ್ಗೆ 10ಗಂಟೆಗೆ ಆಯೋಜನೆ ಮಾಡಲಾಗಿದೆ.
ಈ ಶಿಶಿಕ್ಷು ಕ್ಯಾಂಪಸ್ ಸೆಲೆಕ್ಷನ್ ಕಾರ್ಯಕ್ರಮದಲ್ಲಿ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ (ಬಿಇಎಲ್) ಬೆಂಗಳೂರು ಉದ್ದಿಮೆಗಳ ಪ್ರತಿನಿಧಿಗಳು ಭಾಗವಹಿಸುತ್ತಿದ್ದು, ಶಿಶಿಕ್ಷು ತರಬೇತಿಗಾಗಿ ಅಭ್ಯರ್ಥಿಗಳನ್ನು ಆಯ್ಕೆಮಾಡಿಕೊಳ್ಳುತ್ತಿರುವುದರಿಂದ ಐಟಿಐ ಯಾವುದೇ ವೃತ್ತಿಯ ದ್ವಿತೀಯ ವರ್ಷದಲ್ಲಿ ತರಬೇತಿ ಪಡೆಯುತ್ತಿರುವ ಹಾಗೂ ಈಗಾಗಲೇ ಐಟಿಐ ಉತ್ತೀರ್ಣರಾದ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಈ ತರಬೇತಿಯಲ್ಲಿ ಭಾಗವಹಿಸಬಹುದಾಗಿದ್ದು, ಆಸಕ್ತ ಅಭ್ಯರ್ಥಿಗಳು ಈ ಕ್ಯಾಂಪಸ್‌ನಲ್ಲಿ ಭಾಗವಹಿಸಬಹುದಾಗಿದೆ.
ಹೆಚ್ಚಿನ ಮಾಹಿತಿಗಾಗಿಮೊಬೈಲ್ ಸಂಖ್ಯೆ: 9035198134, 9538003397, 8904784507ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ದರ್ಜೆ-1ರ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


**ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ**
**ಪ್ರಾಚಾರ್ಯರ ಕಾರ್ಯಾಲಯ, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ**
**ಬಸವವೃತ್ತ ಹತ್ತಿರ ಮಾನವಿ-584123 ,**
mail ID :manvigovtiti@gmail.com

ಸಂಖ್ಯೆ :ಕೈತಸಂಮಾ/ Store/Scrap/26-27 ದಿನಾಂಕ: 19/05/2026

**ಪತ್ರಿಕಾ ಪ್ರಕಟಣೆ**

**ಅನುಪಯುಕ್ತ ಎಮ್.ಎಸ್. & ವಿವಿಧ ಸ್ಕ್ರಾಪ್‌ಗಳ(ವಸ್ತುಗಳ) ಬಹಿರಂಗ ಹಾರಜು**

ರಾಯಚೂರು ಜಿಲ್ಲೆಯ ಮಾನವಿ ಸರ್ಕಾರಿ ಕೈಗಾರಿಕಾ ತರಬೆತಿ ಸಂಸ್ಥೆಯಲ್ಲಿ. ಸಂಸ್ಥೆಯ ತರಬೇತಿದಾರರು ಉಪಯೋಗಿಸಿ ಉಗ್ರಾಣಕ್ಕೆ ಹಿಂದುರಿಗಿಸಿದ ಅನುಪಯುಕ್ತ ಎಮ್.ಎಸ್. & ವಿವಿಧ ಸ್ಕ್ರಾಪ್‌ಗಳ(ವಸ್ತುಗಳ) ಬಹಿರಂಗ ಹಾರಜು ದಿನಾಂಕ : 29-05-2026 ಸಮಯ 10:30 ಕ್ಕೆ ನಡೆಸಲಾಗುವುದು. ಆಸ್ತಕ ಖರೀದಿಧರರು, ಮುಂಗಡ ರೂ:500=00 (ಐದು ನೂರು) ರೂಪಾಯಿಗಳನ್ನು ಕಚೇರಿಯಲ್ಲಿ ಪಾವತಿಸಿ ನಿಗದಿತ ಸಮಯಕ್ಕೆ ಹಾಜರಾಗಿ ಬಹಿರಂಗ ಹಾರಜಿನಲ್ಲಿ ಭಾಗವಹಿಸಬಹುದು.

ಹೆಚ್ಚಿನ ಮಾಹಿತಿಗಾಗಿ "ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಎನ್ ಎಸ್ ಬೋಸರಾಜ್ ಕಟ್ಟಡ ಬಸವವೃತ್ತ ಹತ್ತಿರ ಮಾನವಿ"-584123 ಸಂಸ್ಥೆಗೆ,& 9008989877 ಸಂಪರ್ಕಿಸಬಹುದು.

(ರುದ್ರಗೌಡ ಬಿ)
ಪ್ರಾಚಾರ್ಯರು
ಸ ಕೈ ತ ಸಂಸ್ಥೆ ಮಾನವಿ


## ಪ್ರತಿಭಾವಂತ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಪ್ರೋತ್ಸಾಹಧನಕ್ಕಾಗಿ ಅರ್ಜಿ ಅಹ್ವಾನ

**ಮಾನ್ವಿ:** ಪಟ್ಟಣದ ತಾಲೂಕು ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2025-26 ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಪದವಿ,ಸ್ನಾತಕೋತ್ತರ ಕೋರ್ಸಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ಬಾರಿಗೆ ಪ್ರಥಮ ದರ್ಜೆಯಲ್ಲಿ ಪಾಸಾದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಪ್ರೋತ್ಸಾಹಧನಕ್ಕಾಗಿ ಮೇ.15 ರಿಂದ ಅನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಲಾಗಿದು ಅಸಕ್ತರು ಇಲಾಖೆಯ ವೆಬ್ ಸೈಟ್ ವಿಳಾಸ https://swdservises.karnataka.gov.in/prizemonyclientApp ಮೂಲಕ ಅಗತ್ಯ ಧೃಡಿಕೃತ ದಾಖಲೆಗಳೊಂದಿಗೆ ಅರ್ಜಿಯನ್ನು ಭರ್ತಿಮಾಡಿ ಕಛೇರಿಗೆ ಸಲ್ಲಿಸಬೇಕು ಎಂದು ತಾಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರಾದ ಸಾಯಿರಾಬಾನು ನದಾಫ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರದ ಸಮಾರಾಧನೆ ಸಮಾವೇಶ :ಬಿವೈವಿ ಆಕ್ರೋಶ

ಬರ ಮತ್ತು ನೆರೆಯ ಸಂದರ್ಭದಲ್ಲಿ ಸಂಕಷ್ಟದಲ್ಲಿದ್ದ ರೈತರಿಗೆ ಕನಿಷ್ಠ ಸಾಂತ್ವನ ಹೇಳುವ ಕೆಲಸವನ್ನೂ ಈ ಸರ್ಕಾರ ಮಾಡಿಲ್ಲ. ಕೃಷಿ ಬಗ್ಗೆ ಸರ್ಕಾರ ಸಂಪೂರ್ಣ ತಲೆಕೆಡಿಸಿಕೊಂಡಿಲ್ಲ. ಅಭಿವೃದ್ಧಿ ಶೂನ್ಯ ಮತ್ತು ಭ್ರಷ್ಟಾಚಾರ ಮಾತ್ರವೇ ಈ ಸರ್ಕಾರದ ಸಾಧನೆ" ಎಂದು ಕಿಡಿಕಾರಿದರು.

ತುಮಕೂರಿನ ಸಮಾವೇಶಕ್ಕೆ ರಾಜ್ಯದ ತೆರಿಗೆದಾರರ ಹಣವನ್ನು ಬೇಕಾಬಿಟ್ಟಿ ಪೋಲು ಮಾಡಲಾಗುತ್ತಿದೆ ಎಂದು ಆರೋಪಿಸಿದ ವಿಜಯೇಂದ್ರ ಆಡಳಿತ ಯಂತ್ರವನ್ನು ದುರುಪಯೋಗಪಡಿಸಿಕೊಂಡು, ಜನರನ್ನು ಸರ್ಕಾರಿ ಬಸ್‌ಗಳಲ್ಲಿ ಬಲವಂತವಾಗಿ ಸಮಾವೇಶಕ್ಕೆ ಕರೆತರಲಾಗಿದೆ. ಇಂತಹ ಸಮಾವೇಶ ಮಾಡುವಂಥ ಯಾವುದೇ ಘನಂದಾರಿ ಕೆಲಸವನ್ನು ಸರ್ಕಾರ ಮಾಡಿಲ್ಲ. ಕೇವಲ ಗ್ಯಾರಂಟಿ ನೆಪವೊಡ್ಡಿ ಸರ್ಕಾರ ಬದುಕಿದೆ ಎಂದು ತೋರಿಸಿಕೊಳ್ಳಲು ಈ ನಾಟಕವಾಡುತ್ತಿದ್ದಾರೆ. ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಗೆದ್ದಿರಬಹುದು, ಆದರೆ ಅದು ಗ್ಯಾರಂಟಿ ಹಣ ಬಿಡುಗಡೆ ಮಾಡಿ ತಂದ ಗೆಲುವು. ಈ ಗೆಲುವಿನ ನಾಗಾಲೋಟ ಬಹಳ ದಿನ ಮುಂದುವರೆಯಲ್ಲ" ಎಂದರು.

# ಕೆ.ಕೆ.ಆರ್.ಡಿ.ಬಿ. ಮಂಡಳಿ ಸಭೆ:5,000 ಕೋಟಿ ರೂ. ಮೊತ್ತದ ಕ್ರಿಯಾ ಯೋಜನೆ ರೂಪಿಸಲು ಸಭೆ ಒಪ್ಪಿಗೆ



**ಕಲಬುರಗಿ,ಮೇ.19:** ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ 2026-27ನೇ ಆರ್ಥಿಕ ಸಾಲಿಗೆ ರಾಜ್ಯ ಸರ್ಕಾರದಿಂದ ಹಂಚಿಕೆಯಾದ 5,000 ಕೋಟಿ ರೂ. ಮೊತ್ತದ ಅನುದಾನಕ್ಕೆ ಕ್ರಿಯಾ ಯೋಜನೆ ರೂಪಿಸಲು ಸೋಮವಾರ ಜರುಗಿದ ಮಂಡಳಿ ಸಭೆಯಲ್ಲಿ ಸರ್ವಾನುಮತದ ನಿರ್ಣಯ ಕೈಗೊಂಡಿದೆ.

ಮೈಕ್ರೋ ಮತ್ತು ಮ್ಯಾಕ್ರೊ ನಿಧಿಗೆ 2,900 ಕೋಟಿ ರೂ. ಕಾಯ್ದಿರಿಸಿದ್ದು, ಇದರಲ್ಲಿ ಮೈಕ್ರೋಗೆ ಶೇ.70 ಮತ್ತು ಮ್ಯಾಕ್ರೋಗೆ ಶೇ.30 ಅನುದಾನ ಬಳಸಿಕೊಳ್ಳಲು ನಿರ್ಧರಿಸಿದೆ. ಅಲ್ಲದೆ ಬಜೆಟ್ ನಲ್ಲಿ ಘೋಷಿಸುವ ಯೋಜನೆಗಳಿಗೆ 1500 ಕೋಟಿ ರೂ., ಉನ್ನತ ಶಿಕ್ಷಣ ಮತ್ತು ವಿಶ್ವವಿದ್ಯಾನಿಲಯಕ್ಕೆ 100 ಕೋಟಿ ರೂ., ಪ್ರಾದೇಶಿಕ ನಿಧಿ ಒಳಗೊಂಡಂತೆ ಸಿ.ಎಂ, ಮಂಡಳಿ ಅಧ್ಯಕ್ಷರು, ಸರ್ಕಾರದ ವಿವೇಚನಾ ನಿಧಿಗೆ 450 ಕೋಟಿ ರೂ. ಹಾಗೂ ಆಡಳಿತಾತ್ಮಕ ವೆಚ್ಚಕ್ಕೆ 50 ಕೋಟಿ ರೂ. ಅನುದಾನ ಬಳಕೆಗೆ ಒಮ್ಮತದ ನಿರ್ಣಯ ಕೈಗೊಂಡಿದೆ.

ಮೈಕ್ರೊ ಯೋಜನೆಯಡಿ ಸಾಂಸ್ಥಿಕ ವಲಯ ಅಭಿವೃದ್ಧಿಗೆ ಮೀಸಲಾದ ಅನುದಾನದಲ್ಲಿ ಅಕ್ಷರ ಆವಿಷ್ಕಾರಕ್ಕೆ ಶೇ.25 ಇತರೆ ಸಾಂಸ್ಥಿಕ ವಲಯಕ್ಕೆ ಶೇ.15 ಹಾಗೂ ಮೂಲಭೂತ ಸೌಲಭ್ಯ ಕಾರ್ಯಕ್ಕೆ ಶೇ.60ರಷ್ಟು ಅನುದಾನ ನಿಗದಿ ಮಾಡಲಾಗಿದೆ. ಅದೇ ರೀತಿ ಇದೇ ಮೊದಲ ಬಾರಿಗೆ ಆಯವ್ಯಯದಲ್ಲಿ ಘೋಷಿಸಿದಂತೆ ಮ್ಯಾಕ್ರೋ ಯೋಜನೆ ಅನುದಾನದಡಿ ಶೇ.40ರಷ್ಟು ಅನುದಾನ ಆರೋಗ್ಯ, ಶಿಕ್ಷಣ, ಹಾಗೂ ಅಪೌಷ್ಟಿಕತೆ ನಿವಾರಣೆಗೆ ಮೀಸಲಿರಿಸಲು ಸಭೆ ಒಪ್ಪಿಗೆ ಸೂಚಿಸಿದೆ.

ಬೀದರ-ಬೆಂಗಳೂರು ಆರ್ಥಿಕ ಕಾರಿಡಾರ್ ಆಗಿ ಪರಿವರ್ತನೆಗೆ 4 ಪಥದ 400 ಕಿ.ಮೀ ರಸ್ತೆ ಅಭಿವೃದ್ಧಿಪಡಿಸಲು 8,200 ಕೋಟಿ ರೂ. ಅನುದಾನ ಅವಶ್ಯಕತೆ ಇದ್ದು, ಇದನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರ ಭರಿಸಿ ಅಭಿವೃದ್ಧಿಪಡಿಸಲು ಮತ್ತು ರಾಜ್ಯ ಸರ್ಕಾರದ ಮಾದರಿಯಲ್ಲಿ ಮಂಡಳಿಗೆ ಕೇಂದ್ರ ಸರ್ಕಾರ ಸಹ ಮ್ಯಾಚಿಂಗ್ ಗ್ರ್ಯಾಂಟ್ ಅನುದಾನ ಬಿಡುಗಡೆ ಮಾಡಬೇಕೆಂದು ನಿರ್ಧರಿಸಿ ಸಭೆ ಠರಾವು ಪಾಸು ಮಾಡಿದೆ.

ಇನ್ನು ಮಂಡಳಿಗೆ ಮಾಹಿತಿ ಇಲ್ಲದೆ ಸಚಿವ ಸಂಪುಟ ಸಭೆಯಲ್ಲಿ ಯೋಜನೆಗಳಿಗೆ ಮಂಜೂರಾತಿ ನೀಡಿ ಮಂಡಳಿಯಿಂದ ಅನುದಾನ ಹಂಚಿಕೆ ಮಾಡುತ್ತಿದ್ದು, ಇದು ಸರಿಯಾದ ಕ್ರಮವಲ್ಲ. ಯೋಜನೆಗೆ ಒಪ್ಪಿಗೆ ನೀಡುವ ಮುನ್ನ ಆಯಾ ಇಲಾಖೆಗಳು ಮಂಡಳಿಯ ಅನುಮತಿ ಪಡೆಯಬೇಕು.ಈ ನಿಟ್ಟಿನಲ್ಲಿ ಮಂಡಳಿಯು ಎಲ್ಲಾ ಇಲಾಖೆಗೆ ಪತ್ರ ಬರೆಯುವಂತೆ ಸಭೆಯಲ್ಲಿ ಭಾಗಹಿಸಿದ್ದ ಸಚಿವರು, ಶಾಸಕರು ಸಲಹೆ ನೀಡಿದ್ದು, ಅದಕ್ಕೆ ಅಧ್ಯಕ್ಷರು ಸಹಮತಿ ನೀಡಿದಸಭೆ

ಇನ್ನು ಪ್ರಸಕ್ತ 2026-27ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದ ಯೋಜನೆಗೆ ಮಂಡಳಿ ಪಾಲಿನ ಅನುದಾನ ನೀಡಲು ಒಪ್ಪಿಗೆ ಸೂಚಿಸಿದೆ. ಇದಲ್ಲದೆ ಈ ವರ್ಷ ಸಹ ಅಕ್ಷರ ಆವಿಷ್ಕಾರ ಯೋಜನೆಯಡಿ ಪ್ರತಿ ತಾಲೂಕಿಗೆ ಎಸ್.ಎಸ್.ಎಲ್.ಸಿ. ಫಲಿತಾಂಶ ಸುಧಾರಣೆಗೆ ತಲಾ 25 ಲಕ್ಷ ರೂ. ವಿಶೇಷ ಅನುದಾನ ನೀಡಲು ಸಭೆ ಸಮ್ಮತಿಸಿದೆ.

ಇನ್ನು ಪ್ರದೇಶದ ಸರ್ವಾಂಗೀಣ ಅಭಿವೃದ್ಧಿಗೆ ಕೈಗಾರಿಕೆ, ಪ್ರವಾಸೋದ್ಯಮ, ಕೃಷಿ ಹಾಗೂ ಜವಳಿ ನೀತಿಯಲ್ಲಿ ಪ್ರದೇಶದಲ್ಲಿ ಹೆಚ್ಚು ಹೂಡಿಕೆಯಾಗಿ ಸ್ಥಳೀಯರಿಗೆ ಉದ್ಯೋಗ ದೊರಕಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಪ್ರೋತ್ಸಾಹ, ಸಬ್ಸಿಡಿ ನೀಡಬೇಕು. ಕೈಗಾರಿಕೆ ಇಲಾಖೆಯಿಂದ ಪ್ರತ್ಯೇಕ ಕೈಗಾರಿಕೆ ನೀತಿಗೆ ಮಂಡಳಿಯು ಎಷ್ಟು ಪ್ರೋತ್ಸಾಹ ಧನ ನೀಡಬಹುದು ಎಂದು ಕೇಳಿದ್ದಾರೆ. ಆದರೆ ಮಂಡಳಿ ಯಾವುದೇ ಪ್ರೋತ್ಸಾಹ ಧನ ನೀಡಲ್ಲ. ಅದನ್ನು ರಾಜ್ಯ ಸರ್ಕಾರವೇ ಮಾಡಬೇಕು ಎಂದು ಸಭೆಯಲ್ಲಿ ಸರ್ವ ಸಮ್ಮತದ ನಿರ್ಣಯ ತೆಗೆದುಕೊಂಡಿದೆ.

ಇನ್ನು ಮಂಡಳಿಗೆ ವಾರ್ಷಿಕ 5,000 ಕೋಟಿ ರೂ. ಅನುದಾನ ಹಂಚಿಕೆ ಮಾಡುತ್ತಿರುವುದರಿಂದ ಆಯಾ ಆರ್ಥಿಕ ವರ್ಷದಲ್ಲಿ ಖರ್ಚು ಮಾಡಲು ಸಿಬ್ಬಂದಿ ಕೊರತೆ ಇದ್ದು, ಇಂಜಿನಿಯರ್ ಒಳಗೊಂಡ ಕನಿಷ್ಠ 350 ಸಿಬ್ಬಂದಿ ಹೊಸದಾಗಿ ಸೃಜನೆಗೆ ಅನುಮತಿ ನೀಡಲು ಮತ್ತು ಮಂಡಳಿಗೆ ಪ್ರತ್ಯೇಕ ಕಟ್ಟಡ ನಿರ್ಮಾಣ ಮಾಡಲು ಸಹ ಸಭೆ ನಿರ್ಧಾರ ಮಾಡಿದೆ.

ಸಭೆಯಲ್ಲಿ ಮಂಡಳಿ ಸದಸ್ಯರಾಗಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ-ಬಿ.ಟಿ ಸಚಿವ ಪ್ರಿಯಾಂಕ್ ಖರ್ಗೆ, ಅರಣ್ಯ, ಜೀವಿಶಾಸ್ತ್ರ ಹಾಗೂ ಪರಿಸರ ಸಚಿವ ಈಶ್ವರ ಖಂಡ್ರೆ, ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವ ಶರಣಬಸಪ್ಪ ದರ್ಶನಾಪುರ, ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ಎಸ್. ತಂಗಡಗಿ, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಭೋಸರಾಜು, ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್, ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರು ಹಾಗೂ ಆಳಂದ ಶಾಸಕ ಬಿ.ಆರ್.ಪಾಟೀಲ, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ಶಾಸಕ ಬಸವರಾಜ ರಾಯರೆಡ್ಡಿ, ಕೊಪ್ಪಳ ಶಾಸಕ ಕೆ.ರಾಘವೇಂದ್ರ ಹಿಟ್ನಾಳ, ಕರ್ನಾಟಕ ರಾಜ್ಯ ಕೈಗಾರಿಕೆ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಮತ್ತು ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ, ವಿಧಾನ ಪರಿಷತ್ ಶಾಸಕ ಭೀಮರಾವ ಪಾಟೀಲ, ಪ್ರಾದೇಶಿಕ ಆಯುಕ್ತರಾದ ಜಹೀರಾ ನಸ್ಸೀಮ್, ಯೋಜನಾ ಸಲಹಾ ಸಮಿತಿ ಸದಸ್ಯೆ ಪ್ರೋ.ಛಾಯಾ ದೇಗಾಂವಕರ್, ಮಂಡಳಿ ಉಪ ಕಾರ್ಯದರ್ಶಿ ಸುರೇಖಾ ಕಿರಣಗಿ, ಜಂಟಿ ನಿರ್ದೇಶಕಿ ಪ್ರವೀಣ ಪ್ರಿಯಾ ಸೇರಿದಂತೆ ಇತರೆ ಅಧಿಕಾರಿಗಳಿದ್ದರು.

ಸಭೆ ಆರಂಭಕ್ಕು ಮುನ್ನ ಇತ್ತೀಚೆಗೆ ಯೋಜನೆ ಮತ್ತು ಸಾಂಖ್ಯಿಕ ಸಚಿವ ಡಿ.ಸುಧಾಕರ್ ಅವರ ಅಕಾಲಿಕ ನಿಧನ ಹಿನ್ನೆಲೆಯಲ್ಲಿ ಗೌರವಾರ್ಥವಾಗಿ ಒಂದು ನಿಮಿಷ ಮೌನಾಚರಣೆ ಮಾಡಿದಲ್ಲದೆ ಮೃತರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಗೌರವ ಸಲ್ಲಿಸಲಾಯಿತು.

ಮಂಡಳಿ ಕಾರ್ಯದರ್ಶಿ ನಳಿನ್ ಅತುಲ್ ಅವರು ಸರ್ವರನ್ನು ಸಭೆಗೆ ಸ್ವಾಗತಿಸುತ್ತಾ, 2023-24 ರಿಂದ 2025-26ನೇ ಸಾಲಿನ ವರೆಗಿನ ಮಂಡಳಿಯ ಆರ್ಥಿಕ ಮತ್ತು ಭೌತಿಕ ಪ್ರಗತಿ ವಿವರಿಸುತ್ತಾ, ಪ್ರಸಕ್ತ ಸಾಲಿಗೆ 5,000 ಕೋಟಿ ರೂ. ಅನುದಾನ ಘೋಷಣೆ ಮಾಡಿದ್ದರಿಂದ ಚರ್ಚಿಸಬೇಕಾದ ವಿಷಯಗಳನ್ನು ಸಭೆ ಮುಂದಿಟ್ಟರು.

ಆರ್ಥಿಕ ತಜ್ಞೆ ಪ್ರೋ.ಛಾಯಾ ದೇವಗಾಂವಕರ್ ಅವರು ಕಲ್ಯಾಣ ಕರ್ನಾಟಕ ಭಾಗದಲ್ಲಿ ಪ್ರಸ್ತುತ ಶೈಕ್ಷಣಿಕ ಸ್ಥಿತಿಗತಿ ಮತ್ತು ಅದರ ಸುಧಾರಣೆಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಪಿ.ಪಿ.ಟಿ ಮೂಲಕ ಪ್ರಾತ್ಯಕ್ಷಿಕೆ ಮಂಡಿಸಿದರು.

## ಆನ್‌ಲೈನ್ ವೇದಿಕೆಗಳಲ್ಲಿ ಔಷಧ ಮಾರಾಟಕ್ಕೆ ತೀವ್ರ ವಿರೋಧಜಿಲ್ಲೆಯಲ್ಲಿ ನಾಳೆ ಔಷಧ ಅಂಗಡಿಗಳು ಬಂದ್



**ಬೀದರ್: ಮೇ.19:**ಆನ್‌ಲೈನ್ ವೇದಿಕೆಗಳಲ್ಲಿ ಔಷಧ ವ್ಯಾಪಾರ ವಿರೋಧಿಸಿ ಔಷಧ ವ್ಯಾಪಾರಿಗಳು ಜಿಲ್ಲೆಯಲ್ಲಿ ಬುಧವಾರ(ಮೇ 20) ಔಷಧ ಅಂಗಡಿಗಳನ್ನು ಬಂದ್ ಮಾಡಿ ಪ್ರತಿಭಟನೆ ನಡೆಸಲಿದ್ದಾರೆ.

ಆಲ್ ಇಂಡಿಯಾ ಆರ್ಗನೈಸೇಷನ್ ಆಫ್ ಕೆಮಿಸ್ಟ್ ಆಯಿಂಡ್ ಡ್ರಗ್ಗಿಸ್ಟ್ ಹಾಗೂ ಕರ್ನಾಟಕ ಔಷಧ ವ್ಯಾಪಾರಿಗಳ ಸಂಘದ ದೇಶದಾದ್ಯಂತ ಅಂಗಡಿ ಬಂದ್ ಕರೆ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲೂ ಬಂದ್ ನಡೆಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾ ಔಷಧ ವ್ಯಾಪಾರಿಗಳ ಸಂಘದ ಅಧ್ಯಕ್ಷ ಬಸವರಾಜ ಪಾಟೀಲ ಹಾರೂರಗೇರಿ ಹಾಗೂ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ನಮೋಶಿ ತಿಳಿಸಿದ್ದಾರೆ.

ಜಿಲ್ಲೆಯ ಎಲ್ಲ ಹೋಲ್‌ಸೇಲ್ ಮತ್ತು ರಿಟೇಲ್ ಔಷಧ ಅಂಗಡಿಗಳು 24 ಗಂಟೆ ಬಂದ್ ಇರಲಿದ್ದು, ಗ್ರಾಹಕರು ಸಹಕರಿಸಬೇಕು ಎಂದು ಮನವಿ ಮಾಡಿದ್ದಾರೆ.

ಕೋವಿಡ್ ವೇಳೆ ಕೇಂದ್ರ ಸರ್ಕಾರ ಆನ್‌ಲೈನ್ ವೇದಿಕೆಗಳಲ್ಲಿ ಔಷಧ ಮಾರಾಟಕ್ಕೆ ಅನುಮತಿ ನೀಡಿತ್ತು. ಆದರೆ, ಈಗಲೂ ಆನ್‌ಲೈನ್ ಔಷಧ ವೇದಿಕೆಗಳು ಕಡಿಮೆ ದರದಲ್ಲಿ ಮನೆ ಬಾಗಿಲಿಗೇ ಔಷಧ ತಲುಪಿಸುತ್ತಿವೆ. ಇದರಿಂದ ಔಷಧ ಅಂಗಡಿಗಳ ವ್ಯಾಪಾರಕ್ಕೆ ದೊಡ್ಡ ಹೊಡೆತ ಬಿದ್ದಿದೆ ಎಂದು ಆರೋಪಿಸಿದ್ದಾರೆ.

ನಿಯಮಗಳ ಪ್ರಕಾರ ಔಷಧಗಳ ಲಾಭಾಂಶ ಮಿತಿಯನ್ನು ಶೇ 16 ರಿಂದ ಶೇ 20 ರ ವರೆಗೆ ನಿಗದಿಪಡಿಸಿದ್ದರೂ, ಅನೇಕ ಕಾರ್ಪೊರೇಟ್ ಸಂಸ್ಥೆಗಳು ಮಿತಿಯನ್ನು ಉಲ್ಲಂಘಿಸುತ್ತಿವೆ ಎಂದು ದೂರಿದ್ದಾರೆ.

ಸರ್ಕಾರ ಔಷಧಗಳ ಆನ್‌ಲೈನ್ ಮಾರಾಟ ಆದೇಶ ಹಿಂಪಡೆಯಬೇಕು. ಕಾರ್ಪೊರೇಟ್ ಕಂಪನಿಗಳ ಅತಿಯಾದ ರಿಯಾಯಿತಿ ತಡೆಗಟ್ಟಲು ಲೆವೆಲ್ ಪ್ಲೇಯಿಂಗ್ ಫೀಲ್ಡ್ ನೀತಿ ಜಾರಿಗೊಳಿಸಬೇಕು ಎಂದು ಆಗ್ರಹಿಸಿದ್ದಾರೆ.

## ಸಿಡಿಲು ಬಡಿದು ಆರು ಕುರಿಗಳ ಸಾವು, ಮಹಿಳೆಗೆ ಗಂಭೀರ ಗಾಯ



**ಕಲಬುರಗಿ,ಮೇ.19**-ಸಿಡಿಲು ಬಡಿದ ಪರಿಣಾಮ 6 ಕುರಿಗಳು ಸಾವನ್ನಪ್ಪಿದ್ದು, ಮಹಿಳೆಯೊಬ್ಬರಿಗೆ ಗಂಭೀರ ಗಾಯಗಳಾಗಿರುವ ಘಟನೆ ಕಾಳಗಿ ತಾಲೂಕಿನ ವಜೀರಗಾಂವ ಗ್ರಾಮದಲ್ಲಿ ಸೋಮವಾರ ಸಂಜೆ ನಡೆದಿದೆ.

ಗ್ರಾಮದ ರಶೀದಾ ಬೇಗಂ (48) ಅವರು ಕುರಿ ಮೇಯಿಸುತ್ತಿದ್ದ ವೇಳೆ ಸಿಡಿಲು ಬಡಿದ ಪರಿಣಾಮ ತೀವ್ರವಾಗಿ ಗಾಯಗೊಂಡಿದ್ದಾರೆ. ಅವರನ್ನು ತಕ್ಷಣ ಕಾಳಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ. ವೈದ್ಯರು ಹೆಚ್ಚಿನ ಚಿಕಿತ್ಸೆಗೆ ಕಲಬುರಗಿ ಜಿಲ್ಲಾಸ್ಪತ್ರೆಗೆ ರವಾನಿಸಲು ಸೂಚಿಸಿರುವುದಾಗಿ ತಿಳಿದುಬಂದಿದೆ.

ಸಿಡಿಲು ಬಡಿದ ಪರಿಣಾಮ ಮಹಿಳೆಗೆ ಮಾತನಾಡಲು ಸಾಧ್ಯವಾಗುತ್ತಿಲ್ಲ ಎಂದು ಕುಟುಂಬಸ್ಥರು ತಿಳಿಸಿದ್ದಾರೆ. ಇದೇ ವೇಳೆ ಗ್ರಾಮದ ರವಿ ಪೂಜಾರಿ ಅವರಿಗೆ ಸೇರಿದ ಆರು ಕುರಿಗಳು ಸಿಡಿಲು ಬಡಿದು ಸಾವನ್ನಪ್ಪಿರುವುದಾಗಿ ತಿಳಿದುಬಂದಿದೆ.

## ಸಂಗೀತ ಅಂತರಾಳದ ಸಂಕಷ್ಟ ದೂರಮಾಡುತ್ತದೆ



**ಹುಮನಾಬಾದ್:ಮೇ.19:**ಸಂಗೀತ ಅಂತರಾಳದ ಸಂಕಷ್ಟವನ್ನು ದೂರಮಾಡುತ್ತದೆ ಎಂದು ಶ್ರೀ ಮಾಣಿಕ ಪ್ರಭು ಅಂಧ ಮಕ್ಕಳ ಶಾಲೆಯ ಮುಖ್ಯ ವ್ಯವಸ್ಥಾಪಕ ಪ್ರಭು ಪಂಚಾಳ ಹೇಳಿದರು. ಮಾಣಿಕ ನಗರದ ಶ್ರೀ ಮಧುಮತಿ ಕಲ್ಯಾಣ ಮಂಟಪದಲ್ಲಿ ಸ್ವರಸಿಂಧು ಯುಜನ ಮತ್ತು ಸಾಂಸ್ಕೃತಿಕ ಕಲಾ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃಇ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ ಸಂಗೀತೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು ಮಾನಸಿಕ ಸ್ಥಿರತೆಗೆ, ನೆಮ್ಮದಿ ಜೀವನಕ್ಕೆ ಸಂಗೀತ ಅವಶ್ಯವಾಗಿದೆ ಎಂದರು.

ಸುವರ್ಣ ಕಾರರ ಸಂಘದ ಮುಖಂಡರಾದ ರಮೇಶ ಸೋನಾರ ಮಾತನಾಡಿ ಜಾನಪದ ಸಾಹಿತ್ಯ ಮತ್ತು ಸಂಗೀತ ಸಾಮಾನ್ಯ ಜನರಿಂದ ರಚಿತವಾಗಿದ್ದು, ನಮ್ಮ ಜನರ ಬದುಕು ರಿತಿ-ನಿತಿ ಜೀವನ ಶೈಲಿಯನ್ನು ಬಿಂಬಿಸುತ್ತದೆ, ಜಾತಿ,ಮತ,ಧರ್ಮ ಭೆದವಿಲ್ಲದೆ ಜನಪದ ಸಾಹಿತ್ಯ ಹಿಂದಿನ ಕಾಲದಿಂದ ಇಂದಿನವರೆಗೂ ಎಲ್ಲರ ಜೀವನದಲ್ಲಿ ಹಾಸು ಹೊಕ್ಕಾಗಿದೆ ಎಂದರು.

ವಿಶ್ವಕರ್ಮ ಸಮಾಜದ ಹಿರಿಯ ಮುಖಂಡರಾದ ಶ್ರೀ ರಾಮಚಂದ್ರ ಪಂಚಾಳ. ದಿನಕರ ಪಿ. ಶಿಕ್ಷಕ ಸಂದಿಪ ಮತನಾಡಿದರು. ಮಾಜಿ ಗ್ರಾಮ ಪಂಚಾಯತ ಸದಸ್ಯ ಸಂಗಪ್ಪಾ ಎಮ್,ಪಿ. ಅಧ್ಯಕ್ಷತೆ ವಹಿಸಿದರು. ಖ್ಯಾತ ಕಲಾವಿದರಾದ ಶ್ರೀ ಮಂಜುನಾಥ ಉಡುಬನಳ್ಳಿ ತತ್ವಪದ ಹಾಡಿ ಎಲ್ಲರನ್ನು ರಂಜಿಸಿದರು. ಸೂರ್ಯಕಾಂತ ಹಡಪದ ಜಾನಪದ ಹಾಡಿದರು.

ರಮೇಶ ಪಂಚಾಳ ವಳಖಿಂಡಿ ವಚನ ಗೀತೆ ಹಾಡಿದರು. ಕು.ದಿಶಾ ದಿನಕರ ಭಕ್ತಿಗೀತೆ ಹಾಡಿದರು. ಕು.ನಿಕಿತಾ ಪ್ರಭು ದಾಸವಾಣಿ ಗೀತೆಗಳು ಹಾಡಿದರು. ಆಕಾಶವಾಣಿ ಕಲಾವಿದ ಮನೋಹರ ವಿಶ್ವಕರ್ಮ ಸುಗಮ ಸಂಗೀತ ನಡೆಸಿಕೊಟ್ಟರು. ಯುವಕಲಾವಿದ ದಿನೇಶ ಕುಲಕರ್ಣಿ ಹರ್ಮೋನಿಯಂ, ಖ್ಯಾತ ತಬಲಾ ಛತ್ರಪ್ಪಾ ಹಡಪದ ತಬಲಾ ಸಾಥ್ ನೀಡಿದರು. ಸಾಗರ ಸ್ವಾಗತಿಸಿದರು. ಶ್ರೀಮತಿ ಸ್ವಪ್ನಾ ನಿರೂಪಿಸಿದರು.

## ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮವಹಿಸಿ: ಸಿಇಓ ಬದೋಲೆ

**ಭಾಲ್ಕಿ:ಮೇ.19:** ಬೇಸಿಗೆಯ ತೀವ್ರತೆ ಹಿನ್ನೆಲೆಯಲ್ಲಿ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ ಹೇಳಿದರು.

ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಶನಿವಾರ ಜರುಗಿದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆಯಲ್ಲಿ ಅಭಿವೃದ್ಧಿ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯ ಪರಿಹಾರಕ್ಕೆ ಪ್ರಥಮ ಆದ್ಯತೆ ನೀಡಿ ತುರ್ತು ಪರಿಹಾರ ಕೈಗೊಳ್ಳಬೇಕು.

ಸಮಸ್ಯೆ ಇರುವ ಗ್ರಾಮಗಳಲ್ಲಿ ಟ್ಯಾಂಕರ್, ಖಾಸಗಿ ಬಾವಿ ಹಾಗೂ ಬೋರ್‌ವೆಲ್‌ಗಳ ಮೂಲಕ ನೀರು ಪೂರೈಸಬೇಕು. ಜನರಿಗೆ ಸಮರ್ಪಕವಾಗಿ ನೀರು ಪೂರೈಕೆ ಆಗುವಂತೆ ಕಟ್ಟುನಿಟ್ಟಿನ ಕ್ರಮವಹಿಸಬೇಕು ಎಂದು ಖಡಕ್ಕಾಗಿ ತಿಳಿಸಿದರು.

ಉದ್ಯೋಗ ಖಾತ್ರಿ ಯೋಜನೆಯ ಅನುಮೋದಿತ ಕ್ರೀಯಾ ಯೋಜನೆಯಡಿ ನರೇಗಾ ಕೂಲಿ ಕಾರ್ಮಿಕರಿಗೆ ಹಳೆಯ ಆನ್ ಗೋಯಿಂಗ್ ಸಮುದಾಯ ಕಾಮಗಾರಿಗಳಲ್ಲಿ ಕೆಲಸ ಕೊಡಿ.ಕಾಮಗಾರಿ ಸ್ಥಳದಲ್ಲಿ ಅವರಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಿ. ಗ್ರಾಮ ಪಂಚಾಯಿತಿ ತೆರಿಗೆ ಸಂಗ್ರಹ ಕಾರ್ಯ ತೀವ್ರಗೊಳಿಸಿ ಎಂದರು.

ಜಿಲ್ಲಾ ಪಂಚಾಯಿತಿ ಸಹಾಯಕ ಕಾರ್ಯದರ್ಶಿ (ಆಡಳಿತ) ಶಿವಲೀಲಾ, ತಾಲ್ಲೂಕು



ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ ಮಾಣಿಕರಾವ್, ನರೇಗಾ ಸಹಾಯಕ ನಿರ್ದೇಶಕ ಬಾಲಾಜಿ ಕೋಟೆ ಸೇರಿದಂತೆ ವಿವಿಧ ಗ್ರಾಮ ಪಂಚಾಯಿತಿಗಳ ಪಿಡಿಓ, ಕಾರ್ಯದರ್ಶಿ ಹಾಗೂ ಕರವಸೂಲಿಗಾರರು ಸಭೆಯಲ್ಲಿ ಹಾಜರಿದ್ದರು.

## ಬೈಕ್ ಸವಾರಿ ಮಾಡಿ ಗಮನ ಸೆಳೆದ ಸಂಸದ ಜಿಗಜಿಣಗಿ



**ವಿಜಯಪುರ, ಮೇ. 19:**ಪ್ರಧಾನಿ ನರೇಂದ್ರ ಮೋದಿ ಅವರ ಮಿತ ವ್ಯಯ ಸೂತ್ರ ಪಾಲನೆ ಹಿನ್ನೆಲೆಯಲ್ಲಿ ಸಂಸದ ರಮೇಶ ಜಿಗಜಿಣಗಿ ಹೆಲ್ಮೇಟ್ ಧರಿಸಿ ಇಲೆಕ್ಟ್ರಿಕ್ ವಾಹನದ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ತೆರಳಿದರು.

ಬಿಜೆಪಿ ಮುಖಂಡ ಪಾಪುಸಿಂಗ್ ರಜಪೂತ ಅವರ ಜೊತೆ ಹೆಲ್ಮೇಟ್ ಧರಿಸಿ ಜಿಲ್ಲಾಧಿಕಾರಿಗಳ ಕಚೇರಿಗೆ ಆಗಮಿಸಿ ಎಲ್ಲರ ಗಮನ ಸೆಳೆದು ಅಚ್ಚರಿ ಮೂಡಿಸಿದರು.

ಯುದ್ಧದ ಸಂಕಷ್ಟಗಳ ಕಾಲಘಟ್ಟದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಇಂಧನ ಮಿತ ಬಳಕೆ, ಚಿನ್ನ ಖರೀದಿ ಮುಂದೂಡಿಕೆ ಸಲಹೆ ನೀಡಿದ್ದಾರೆ. ಈ ಸಲಹೆ ಪಾಲನೆ ಹಿನ್ನೆಲೆಯಲ್ಲಿ ನಾನು ಸಹ ಕಾರಿನ ಬಳಕೆಯನ್ನು ಸಾಕಷ್ಟು ಮಿತಿಗೊಳಿಸಿರುವೆ. ಇಲೆಕ್ಟ್ರಿಕ್ ವಾಹನ ಮೊರೆ ಹೋಗಿರುವೆ. ಬೇರೆ ದೇಶದಲ್ಲಿ ಇಂಧನ ಬೆಲೆ ಗಗನಕ್ಕೆ ಹೋಗಿದೆ. ಆದರೆ ಮೋದಿಜಿ ಅವರ ಸಮರ್ಥ ನಾಯಕತ್ವದಲ್ಲಿ ಇಂಧನ ಬೆಲೆಯನ್ನು ಜನಸಾಮಾನ್ಯರಿಗೆ ಹೊರೆಯಾಗದಂತೆ ನೋಡಿಕೊಳ್ಳಲಾಗುತ್ತಿದೆ. ಜನತೆಯೂ ಮೋದಿಜಿ ಅವರ ಕೂಗಿಗೆ ಸ್ಪಂದಿಸಿದ್ದಾರೆ ಎಂದರು.

## ರೌಡಿ ಶೀಟರ್ ಮೊಹ್ಮದ್ ಉಸ್ಮಾನ್ ಗಡಿಪಾರು



**ಕಲಬುರಗಿ,ಮೇ.19–**ನಗರದ ಚೌಕ್ ಪೊಲೀಸ್ ಠಾಣೆ ವ್ಯಾಪ್ತಿಯ ರೌಡಿ ಶೀಟರ್ ಮೊಹ್ಮದ್ ಉಸ್ಮಾನ್ ಅಲಿಯಾಸ್ ಉಸ್ಮಾನ್ ಸಾಬ್( 33) ನನ್ನು ಬಾಗಲಕೋಟೆ ಜಿಲ್ಲೆಯ ಬಾಗಲಕೋಟ ಟೌನ್ ಪೊಲೀಸ್ ಠಾಣೆ ವ್ಯಾಪ್ತಿಗೆ ಗಡಿಪಾರು ಮಾಡಲಾಗಿದೆ. ನಗರದ ಶಹಾಬಜಾರ್ ಸನಾ ಮೊಹಲ್ಲಾ ನಿವಾಸಿಯಾದ ಈತನ ಮೇಲೆ ವಿವಿಧ ಪೊಲೀಸ್ ಠಾಣೆಗಳಲ್ಲಿ 8 ಪ್ರಕರಣಗಳು ದಾಖಲಾಗಿವೆ. ಆರೋಪಿ ರೂಢಿಗತ ಆಪಾದಿತನಾಗಿದ್ದು, "ಎ" ರೌಡಿ ಎಂದು ಗುರುತಿಸಲಾಗಿದೆ.

ಆರೋಪಿಯ ಕಾನೂನು ಬಾಹಿರ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಆರೋಪಿಯನ್ನು ಗಡಿಪಾರು ಮಾಡುವುದು ಸೂಕ್ತ ಎಂದು ಚೌಕ್ ಪೊಲೀಸ್ ಠಾಣೆ ಪಿಐ ಸುಶೀಲಕುಮಾರ ಅವರು ಕರ್ನಾಟಕ ಪೊಲೀಸ್ ಕಾಯ್ದೆ–1963 ಕಲಂ 55ರ ಆಕ್ಟ್ ಅಡಿಯಲ್ಲಿ ಗಡಿಪಾರು ಮಾಡಲು ವರದಿ ಸಲ್ಲಿಸಿದ ಹಿನ್ನೆಲೆಯಲ್ಲಿ ಡಿಸಿಪಿ ಶಾಲೂ ಹಾಗೂ ನ್ಯಾಯಾಲದಯದ ವಿಶೇಷ ಕಾರ್ಯನಿರ್ವಾಹಕ ದಂಡಾಧಿಕಾರಿಗಳು ಆರೋಪಿಯನ್ನು ಬಾಗಲಕೋಟ ಟೌನ್ ಪೊಲೀಸ್ ಠಾಣೆ ವ್ಯಾಪ್ತಿಗೆ ಗಡಿಪಾರು ಮಾಡಿ ಆದೇಶ ಹೊರಡಿಸಿದ್ದಾರೆ.

## ಗೃಹಬಳಕೆ ಸಿಲಿಂಡರ್‌ಗಳ ವಶ



**ಭಾಲ್ಕಿ, ಮೇ 19:**ಭಾಲ್ಕಿ ಪಟ್ಟಣ ಪ್ರದೇಶದ ವಿವಿಧ ಹೋಟೆಲ್‌ಗಳು ಹಾಗೂ ಟೀ ಪಾಯಿಂಟ್‌ಗಳಲ್ಲಿ ವಾಣಿಜ್ಯ ಬಳಕೆಯ ಬದಲಾಗಿ, ನಿಯಮಬಾಹಿರವಾಗಿ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್ ಗಳನ್ನು ವ್ಯಾಪಕವಾಗಿ ಬಳಸಲಾಗುತ್ತಿದೆ ಎಂಬ ಸಾರ್ವಜನಿಕ ದೂರುಗಳ ಹಿನ್ನೆಲೆಯಲ್ಲಿ, ಇಂದುತಹಸೀಲ್ದಾರ ನೇತೃತ್ವದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳ ಜಂಟಿತಂಡ ಭರ್ಜರಿ ದಾಳಿ ನಡೆಸಿ ಅಕ್ರಮವಾಗಿ ಬಳಸುತ್ತಿದ್ದ ಎಲ್‌ಪಿಜಿ ಸಿಲಿಂಡರಗಳನ್ನು ವಶಪಡಿಸಿಕೊಂಡರು, ಈ ಕಾರ್ಯಾಚರಣೆಯಲ್ಲಿತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಆಹಾರ ಇಲಾಖೆಯ ಆಹಾರ ಶಿರಸ್ತೆದಾರರು ಹಾಗೂ ಆಹಾರ ನಿರೀಕ್ಷಕರು, ಭಾಲ್ಕಿ ನಗರಸಭೆಯ ಮುಖ್ಯ ಅಧಿಕಾರಿಗಳು ಮತ್ತು ಭಾಲ್ಕಿ ವೃತ್ತ ಪೊಲೀಸ್ ನಿರೀಕ್ಷಕರು ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.

# ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ9 ವಿದ್ಯಾರ್ಥಿಗಳಿಗೆ ತಲಾ 5 ಸಾವಿರ ನಗದು ಬಹುಮಾನ ಸಾಧಕ ಪತ್ರಕರ್ತರಿಗೆ ಸನ್ಮಾನ

**ಯಾದಗಿರಿ:ಮೇ.19:** ಪತ್ರಕರ್ತರ ಮಕ್ಕಳು ಶಿಕ್ಷಣ ಹಾಗೂ ಪ್ರತಿಭೆಯ ಮೂಲಕ ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ಚೆನ್ನಾರೆಡ್ಡಿ ಪಾಟೀಲ್ ತುನ್ನೂರು ಹೇಳಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ಆಯೋಜಿಸಿದ್ದ ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ ಹಾಗೂ ಸಾಧಕ ಪತ್ರಕರ್ತರ ಅಭಿನಂದನಾ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಸಮಾಜದಲ್ಲಿ ಜಾಗೃತಿ ಮೂಡಿಸುವಲ್ಲಿ ಮಾಧ್ಯಮಗಳ ಪಾತ್ರ ಮಹತ್ವದ್ದಾಗಿದ್ದು, ಪತ್ರಕರ್ತರು ತಮ್ಮ ವೃತ್ತಿ ಜವಾಬ್ದಾರಿಗಳ ಜೊತೆಗೆ ಮಕ್ಕಳ ಶಿಕ್ಷಣ ಹಾಗೂ ಭವಿಷ್ಯದ ರೂಪಿಕರಣದತ್ತ ಹೆಚ್ಚಿನ ಗಮನ ಹರಿಸಬೇಕು ಎಂದು ಸಲಹೆ ನೀಡಿದರು. ವಿದ್ಯಾರ್ಥಿಗಳು ಗುರಿ ಸಾಧನೆಗಾಗಿ ಕಠಿಣ ಪರಿಶ್ರಮ ಮತ್ತು ನಿರಂತರ ಅಧ್ಯಯನಕ್ಕೆ ಒತ್ತು ನೀಡಬೇಕು ಎಂದರು.

ಜಿಲ್ಲಾ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಶ್ರೀಧರ್ ಸಾಹುಕಾರ್ ಮಾತನಾಡಿ, ವಿದ್ಯಾರ್ಥಿಗಳಿಗೆ ಸಂದೇಶ ನೀಡಿದ ಅವರು ಮೊಬೈಲ್ ಹಾಗೂ ದೂರದರ್ಶನಗಳ ಅತಿಯಾದ ಬಳಕೆಯಿಂದ ದೂರವಿದ್ದು, ಹೊರಾಂಗಣ ಕ್ರೀಡೆಗಳು ಮತ್ತು ಸೃಜನಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಪತ್ರಕರ್ತರು ತಮ್ಮ ಅಮೂಲ್ಯ ಸಮಯವನ್ನು ಸಮಾಜದ ಒಳಿತಿಗಾಗಿ ಮೀಸಲಿಡುತ್ತಿರುವುದು ಯುವ ಪೀಳಿಗೆಗೆ ಮಾದರಿಯಾಗಿದೆ ಎಂದು ಹೇಳಿದರು.

ಇಂದಿನ ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಸಾಮಾಜಿಕ ಜವಾಬ್ದಾರಿಯನ್ನೂ ಅರಿತುಕೊಳ್ಳಬೇಕು. ಮೊಬೈಲ್ ಹಾಗೂ ಟಿವಿಗಳಿಂದ ದೂರವಿದ್ದು ಗುರಿಯತ್ತ ಏಕಾಗ್ರತೆಯಿಂದ ಮುನ್ನಡೆಯುವ ಮೂಲಕ ಉತ್ತಮ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಪತ್ರಕರ್ತರ ಮಕ್ಕಳು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುವ ಮೂಲಕ ಜಿಲ್ಲೆಯ



ಹೆಮ್ಮೆ ಹೆಚ್ಚಿಸಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಪತ್ರಕರ್ತ ಸಂಘದ ಜಿಲ್ಲಾ ಅಧ್ಯಕ್ಷ ಮಲ್ಲಪ್ಪ ಸಂಕೀನ್ ಮಾತನಾಡಿ, ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಪತ್ರಕರ್ತರ ಮಕ್ಕಳಿಗೆ ತಲಾ 5 ಸಾವಿರ ನಗದು ಬಹುಮಾನ ನೀಡಿ ಗೌರವಿಸುತ್ತಿರುವ ರಾಜ್ಯದ ಮೊದಲ ಸಂಘ ಯಾದಗಿರಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವಾಗಿದೆ ಎಂದು ತಿಳಿಸಿದರು. ಪ್ರತಿಭಾವಂತ ಮಕ್ಕಳನ್ನು ಗುರುತಿಸಿ ಪ್ರೋತ್ಸಾಹಿಸುವ ಮೂಲಕ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಸಾಧ್ಯವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಜಿಲ್ಲೆಯ ಪತ್ರಕರ್ತರ ಮಕ್ಕಳಾದ ರಿಷಿಕಾ ರಾಘವೇಂದ್ರ ಸೈದಾಪುರ, ವರುಣ ಮಹೇಶ್ ಕಲಾಲ, ಮುತ್ತುರಾಜ್ ರವಿರಾಜ್ ಕಂದಳ್ಳಿ, ಭಾರ್ಗವ ಭೀಮಸೇನರಾವ ಕುಲಕರ್ಣಿ, ಇಕ್ರಾ ಶಹಜಿಯಾ ಖಾಜಾ ಕಲೀಮುದ್ದೀನ್ ಫರೀದಿ ಸುರಪುರ, ಸಾಯಿಸುಜಲ ಮಲ್ಲಿಕಾರ್ಜುನ ಮುದ್ನೂರ ಶಹಾಪುರ, ಸಂಗೀತಾ ಶಿವಣ್ಣ ಚಿನ್ನಾಕಾರ ಬೂದಿಹಾಳ, ಹರ್ಷಿತ್ ರಾಠಿ ಹಾಗೂ ಯಶೋಧಾ ಚಂದ್ರು ನಾರಾಯಣಪುರ ಅವರಿಗೆ ತಲಾ 5 ಸಾವಿರ ನಗದು ಬಹುಮಾನ ನೀಡಿ ಸನ್ಮಾನಿಸಲಾಯಿತು. ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರು ಅವರು ಹೆಚ್ಚುವರಿಯಾಗಿ ಪ್ರತಿಯೊಬ್ಬ ವಿದ್ಯಾರ್ಥಿಗೂ ತಲಾ 2 ಸಾವಿರ ಪ್ರೋತ್ಸಾಹಧನ ವಿತರಿಸಿದರು.

ಅದೇ ವೇಳೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಮಟ್ಟದ ಪ್ರಶಸ್ತಿ ಪುರಸ್ಕೃತ ಪತ್ರಕರ್ತರಾದ ಅಮರೇಶ ಹಿರೇಮಠ, ಟಿ. ನಾಗೇಂದ್ರ, ಮಲ್ಲಯ್ಯ ಪೋಲಂಪಲ್ಲಿ ಹಾಗೂ ಬಸವರಾಜ ಕಟ್ಟಿಮನಿ ಅವರನ್ನು ಸನ್ಮಾನಿಸಿ ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರು, ಪತ್ರಕರ್ತ ಸಂಘದ ಜಿಲ್ಲಾ ಅಧ್ಯಕ್ಷ ಮಲ್ಲಪ್ಪ ಸಂಕೀನ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಶ್ರೇಣಿಕುಮಾರ ಧೋಕಾ, ಜಿಲ್ಲಾ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಶ್ರೀಧರ್ ಸಾಹುಕಾರ್, ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದಪ್ಪ ಲಿಂಗೇರಿ, ರಾಜ್ಯ ಪರಿಷತ್ ಸದಸ್ಯ ಸಾಗರ್ ದೇಸಾಯಿ, ಸಂಘದ ಖಜಾಂಚಿ ರಾಜು ನಲ್ಲಿಕರ್ ಸೇರಿದಂತೆ ಅನೇಕ ಗಣ್ಯರು, ಪತ್ರಕರ್ತರು ಹಾಗೂ ವಿದ್ಯಾರ್ಥಿಗಳ ಪೋಷಕರು ಉಪಸ್ಥಿತರಿದ್ದರು.

# ಆ. 21 ರಿಂದ 'ಸಮಾದಾನ ಸಮಾರೋಹ' ವಿಶೇಷ ಲೋಕ ಅದಾಲತ್

**ಕಲಬುರಗಿ: ಮೇ.19:** ಗೌರವಾನ್ವಿತ ಸರ್ವೋಚ್ಚ ನ್ಯಾಯಾಲಯವು 'ಸಮಾದಾನ ಸಮಾರೋಹ; ವಿಶೇಷ ಲೋಕ ಅದಾಲತ್ ಕಾರ್ಯಕ್ರಮವು ಆಗಷ್ಟ ತಿಂಗಳ 21, 22, ಮತ್ತು 23ರಂದು ಮೂರು ದಿನಗಳ ಕಾಲ ನಡೆಯಲಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ನ್ಯಾಯಾಧೀಶರಾದ ಶ್ರೀನಿವಾಸ ನವಲೆ ತಿಳಿಸಿದರು.

ನಗರದ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಕರೆದ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಕಲಬುರಗಿ ಜಿಲ್ಲೆಯಲ್ಲಿ ಇತ್ಯರ್ಥಗೊಂಡ ಪ್ರಕರಣಗಳ ಕುರಿತು ಈಗ ಅವುಗಳ ಬಗ್ಗೆ ಸರ್ವೋಚ್ಚ ನ್ಯಾಯಾಲಯದಲ್ಲಿ ಇತ್ಯರ್ಥಕ್ಕೆ ಬಾಕಿ ಇರುವ ಪ್ರಕರಣಗಳನ್ನು ರಾಜಿ ಮೂಲಕ ಇತ್ಯರ್ಥಪಡಿಸಿಕೊಳ್ಳಲು ವಿಶೇಷ ಲೋಕ ಅದಾಲತ್ ಆಯೋಜಿಸಲಾಗಿದೆ. ಪಕ್ಷಗಾರರು ನವದೆಹಲಿಗೆ ಹೋಗದೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಛೇರಿಯಲ್ಲಿ ಮತ್ತು ತಾಲ್ಲೂಕು ಕಾನೂನು ಸೇವಾ ಸಮಿತಿಯಲ್ಲಿ ಹಾಜರಾಗಿ ರಾಜಿ ಸಂಧಾನಕ್ಕೆ ಮಧ್ಯಸ್ಥಗಾರರ ಮೂಲಕ ಪ್ರಕರಣವನ್ನು ಇತ್ಯರ್ಥಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ರಾಜಿ ಸಂಧಾನದಲ್ಲಿ ಭಾಗವಹಿಸಲು ವಿ.ಸಿ. ಸೌಲಭ್ಯ ಸಹ ಇರುತ್ತದೆ. ಕಾರಣ ಕಲಬುರಗಿ ಜಿಲ್ಲೆಯಲ್ಲಿ ಇತ್ಯರ್ಥಗೊಂಡಿರುವ ಪ್ರಕರಣಗಳ ಕುರಿತು ಸರ್ವೋಚ್ಚ ನ್ಯಾಯಾಲಯದಲ್ಲಿರುವ



ಪ್ರಕರಣಗಳನ್ನು ರಾಜಿ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಕಕ್ಷಿದಾರರು ಸಹಕರಿಸಬೇಕೆಂದು ಮತ್ತು ತಮ್ಮ ಪ್ರಕರಣಗಳನ್ನು ರಾಜಿ ಮಾಡಿಕೊಳ್ಳುವ ಪ್ರಕ್ರಿಯೆಯಲ್ಲಿ ಭಾಗ ವಹಿಸಬೇಕೆಂದು ಕಕ್ಷಿದಾರರಿಗೆ ಸಲಹೆ ನೀಡಿದರು.

ಮಾನ್ಯ ಸರ್ವೋಚ್ಚ ನ್ಯಾಯಾಲಯವು ಕರ್ನಾಟಕಕ್ಕೆ ಸಂಬಂಧಪಟ್ಟ ಒಟ್ಟು 4,328 ಪ್ರಕರಣಗಳನ್ನು ಈ ಪೂರ್ವ ಸಮಾಧಾನ ಪ್ರಕ್ರಿಯೆಗಾಗಿ ಗುರುತಿಸಿದ್ದು, ಇವುಗಳನ್ನು ಜಿಲ್ಲಾವಾರು ವಿಂಗಡಿಸಿ ಆಯಾ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳಿಗೆ ರವಾನಿಸಲಾಗಿದೆ. ಇದರಲ್ಲಿ ಸರ್ಕಾರಿ ಸಂಸ್ಥೆಗಳು ಪಕ್ಷಗಾರರಾಗಿರುವ 937 ಕ್ಕೂ ಹೆಚ್ಚು ಪ್ರಕರಣಗಳೂ ಸೇರಿದ್ದು, ಇವುಗಳ ಶೀಘ್ರ ಇತ್ಯರ್ಥಕ್ಕಾಗಿ ಮಾನ್ಯ ಅಡ್ವೋಕೇಟ್ ಜನರಲ್ ಅವರೊಂದಿಗೆ ಸಭೆ ನಡೆಸಿ ಸರ್ಕಾರದ ಪೂರ್ಣ ಸಹಕಾರವನ್ನು ಕೋರಲಾಗಿದೆ ಎಂದು ಹೇಳಿದರು.


ಈ ವಿಶೇಷ ಅದಾಲತ್ನಲ್ಲಿ ಬ್ಯಾಂಕಿಂಗ್, ನಾಗರಿಕ ಕಾನೂನು (Civil), ಪರಿಹಾರ ಪ್ರಕರಣಗಳು, ಗ್ರಾಹಕ ವ್ಯಾಜ್ಯಗಳು ಮತ್ತು ರೇರಾ (RERA), ಕ್ರಿಮಿನಲ್, ಕೌಟುಂಬಿಕ ವಿವಾದಗಳು, ಕಾರ್ಮಿಕ ಮತ್ತು ಕೈಗಾರಿಕಾ ಕಾನೂನುಗಳು, ಭೂಸ್ವಾಧೀನ, ಆಸ್ತಿ ತೆರಿಗೆ ಹಾಗೂ ಬಾಡಿಗೆ ನಿಯಂತ್ರಣಕ್ಕೆ ಸಂಬಂಧಿಸಿದ 12 ಪ್ರಮುಖ ವಿಭಾಗಗಳ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗುತ್ತದೆ.

ಪಕ್ಷಗಾರರಿಗೆ ನೋಟಿಸ್ ಜಾರಿಯಾದ ನಂತರ, ಸ್ಥಳೀಯ ಜಿಲ್ಲಾ ಅಥವಾ ತಾಲೂಕು ಕಾನೂನು ಸೇವಾ ಪ್ರಾಧಿಕಾರಗಳಲ್ಲಿ ಭೌತಿಕವಾಗಿ ಅಥವಾ ವರ್ಚುವಲ್ ವಿಧಾನದಲ್ಲಿ ಪೂರ್ವ ಸಮಾಧಾನ ಸಭೆಗಳು ನಡೆಯಲಿವೆ. ಒಂದು ವೇಳೆ ಪಕ್ಷಗಾರರು ಬೇರೆ ರಾಜ್ಯಗಳಲ್ಲಿದ್ದರೆ, ಅವರ ವಿನಂತಿಯ ಮೇರೆಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಭಾಗವಹಿಸಲು ಸೂಕ್ತ ವ್ಯವಸ್ಥೆ ಕಲ್ಪಿಸಲಾಗುವುದು.

ವಕೀಲರು ಮತ್ತು ಸಾರ್ವಜನಿಕರು ಈ ಅದಾಲತ್ನ ಪ್ರಯೋಜನ ಪಡೆಯಲು ಸುಪ್ರೀಂ ಕೋರ್ಟ್ನ ಅಧಿಕೃತ ವೆಬ್ಸೈಟ್ ತಿತಿತಿ.ಛಿ.ರಿಠಿ.ಟಿ ನಲ್ಲಿ ಲಭ್ಯವಿರುವ ಗೂಗಲ್ ಫಾರ್ಮ್ ಲಿಂಕ್ ಮೂಲಕ ತಮ್ಮ ವಿನಂತಿಯನ್ನು ಸಲ್ಲಿಸಬಹುದು. ನ್ಯಾಯಾಲಯದ ಅಲೆದಾಟವಿಲ್ಲದೆ, ಉಚಿತವಾಗಿ ಹಾಗೂ ಸೌಹಾರ್ದಯುತವಾಗಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವರು ಮನವಿ ಮಾಡಿದರು.

# ಬಡ ಮಕ್ಕಳಿಗೆ ಉತ್ತಮ ವಸತಿ ಸೌಲಭ್ಯ ಸರ್ಕಾರದ ಆದ್ಯತೆ : ಶಾಸಕ ಲಕ್ಷ್ಮಣ ಸವದಿ

**ಅಥಣಿ :ಮೇ.19:** ಶಿಕ್ಷಣದಿಂದ ವಂಚಿತರಾದವರ ಮಕ್ಕಳಿಗೆ ಉನ್ನತ ಶಿಕ್ಷಣ ನೀಡಬೇಕೆಂಬುದು ನಮ್ಮ ಸರ್ಕಾರದ ಪ್ರಮುಖ ಧ್ಯೇಯವಾಗಿದ್ದು. ಆ ನಿಟ್ಟಿನಲ್ಲಿ ಗ್ರಾಮೀಣ ಭಾಗದ ಬಡ ಹಾಗೂ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಸರ್ಕಾರ ಗುಣಮಟ್ಟದ ಶಿಕ್ಷಣದ ಜೊತೆಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಬದ್ಧವಾಗಿದೆ. ವಿದ್ಯಾರ್ಥಿಗಳಿಗೆ ಅನುಕೂಲಕರ ವಾತಾವರಣ ಕಲ್ಪಿಸುವ ಉದ್ದೇಶದಿಂದ ವಸತಿ ನಿಲಯಗಳ ಅಭಿವೃದ್ಧಿಗೆ ಸರ್ಕಾರ ವಿಶೇಷ ಆದ್ಯತೆ ನೀಡುತ್ತಿದೆ ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು.



ಅಥಣಿ ಪಟ್ಟಣದಲ್ಲಿ ಸಮಾಜ ಕಲ್ಯಾಣ ಇಲಾಖೆಯ 2025–26 ನೇ ಸಾಲಿನ ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯಕ್ಕೆ 1 ಕೋಟಿ ರೂ.ಗಳಲ್ಲಿ ಹೆಚ್ಚುವರಿ ಕೊಠಡಿಗಳ ನಿರ್ಮಾಣ ಕಾಮಗಾರಿಗೆ ಶಾಸಕ ಲಕ್ಷ್ಮಣ ಸವದಿ ಅವರು ಭೂಮಿ ಪೂಜೆ ನೆರವೇರಿಸಿ ಕಾಮಗಾರಿಗೆ ಚಾಲನೆ ನೀಡಿ ಮಾತನಾಡುತ್ತಿದ್ದರು. ತಾಲೂಕಿನ ರೈತರ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರಕಬೇಕು ಎಂಬ ಉದ್ದೇಶದಿಂದ ಅನೇಕ ಶಾಲೆಗಳನ್ನು ಮತ್ತು ವಸತಿ ಶಾಲೆಗಳನ್ನು ಸರ್ಕಾರದಿಂದ ಮಂಜೂರಾತಿ ಪಡೆದುಕೊಳ್ಳಲಾಗಿದೆ.

ಪಟ್ಟಣದ ಸಮಾಜ ಕಲ್ಯಾಣ ಇಲಾಖೆಯ ಈ ವಸತಿ ನಿಲಯದಲ್ಲಿ ಮಕ್ಕಳಿಗೆ ಅಗತ್ಯ ಹೆಚ್ಚುವರಿ ಕೋಣೆಗಳನ್ನು ನಿರ್ಮಿಸಲು ಆದ್ಯತೆ ನೀಡಲಾಗಿದೆ. ಕಾಮಗಾರಿಯನ್ನು ನಿಗದಿತ ಅವಧಿಯೊಳಗೆ ಮುಗಿಸುವಂತೆ ಸೂಚನೆ ನೀಡಿದರು. ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಮೂಲಸೌಕರ್ಯ ಕಲ್ಪಿಸುವ ಭರವಸೆಯನ್ನು ಶಾಸಕರು ನೀಡಿದರು.

ಈ ವೇಳೆ ಪುರಸಭೆ ಅಧ್ಯಕ್ಷ ಶಿವಲೀಲಾ ಬುಟಾಳಿ, ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ದತ್ತಾ ವಾಸ್ಟರ್. ಸದಸ್ಯರಾದ ರಾಜಶೇಖರ ಗುಡೊಡಗಿ, ಮಲ್ಲಿಕಾರ್ಜುನ ಬುಟಾಳಿ, ರಾವಸಾಬ ಐಹೊಳೆ, ಮಲ್ಲೇಶ ಹುದ್ದಾರ, ಸಂತೋಷ ಸಾವಡಕರ, ಸಯ್ಯದಅಮೀನ ಗದ್ಯಾಳ, ಕಲ್ಲೇಶ್ ಮಡ್ಡಿ. ರಿಯಾಜ್ ಸನದಿ. ಪ್ರಮೋದ ಬಿಳ್ಳೂರ. ಉದಯ ಸೋಳಸಿ. ಮುಸ್ತಾಕ್ ಮುಲ್ಲಾ. ಶಶಿಕಾಂತ ಹಲಕುಂದ. ಮುಖಂಡರಾದ ದಿಲೀಪ್ ಲೋಣಾರೆ. ರವಿ ಭಡಕಂಬಿ. ಬಾಬು ಖೇಮಲಾಪೂರ. ತಾಲೂಕಾ ಸಮಾಜ ಕಲ್ಯಾಣ ಅಧಿಕಾರಿ ಪರಶುರಾಮ ಪತ್ತಾರ, ಚಂದ್ರಕಾಂತ ಕಾಂಬಳೆ, ನಿಲಯ ಪಾಲಕ ರಾಜಶೇಖರ ಹಿರೇಮನಿ, ಕೆಆರ್‌ಡಿಎಲ್ ಜೆಇ ಸಂತೋಷ ಶೇಗುಣಸಿ, ಗಿರಿರಾಜ ಹೋಮಕರ, ಅಡಿವೆಪ್ಪ ಉಲ್ಲಾಗಡ್ಡಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE